# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com

Volume: 01 | Issue : 26 | THURSDAY 02-04-2026 | PRGI No : KNKAN/26/A0962 | Pages:4 | Rs.2.00 | M: 9742418836


## ಜನರಿಗೆ ರಾಜ್ಯದ ಆರ್ಥಿಕ ಪರಿಸ್ಥಿತಿಯ ನೈಜ ಚಿತ್ರಣ ತಿಳಿಸಿ: ಮುಖ್ಯಮಂತ್ರಿಗೆ ಬಿ.ವೈ.ವಿಜಯೇಂದ್ರ ಆಗ್ರಹ!





ಬಾಗಲಕೋಟೆ: ಹಣಕಾಸಿನ ಸಚಿವರೂ ಆದ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ಆರ್ಥಿಕ ಪರಿಸ್ಥಿತಿಯ ನೈಜ ಚಿತ್ರಣವನ್ನು ಜನರಿಗೆ ತಿಳಿಸುವ ಪುಣ್ಯದ ಕೆಲಸ ಮಾಡಬೇಕೆಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ.

ಮಾಧ್ಯಮ ಪ್ರತಿನಿಧಿಗಳ ಜೊತೆ ಇಂದು ಮಾತನಾಡಿದ ಅವರು, ಕಾಂಗ್ರೆಸ್ ಸರಕಾರ ಆಡಳಿತಕ್ಕೆ ಬಂದು ಮೂರು ವರ್ಷಗಳಾಗಿವೆ. ಅಧಿಕಾರಕ್ಕೆ ಬಂದ ಒಂದೇ ತಿಂಗಳಲ್ಲಿ ಖಾಲಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುತ್ತೇವೆ ಎಂದು ಭರವಸೆ ನೀಡಿದ್ದೀರಿ. ಅದು ಮರೆತು ಹೋಯಿತೇ? ಎಂದು ಕೇಳಿದರು.

2 ಲಕ್ಷ 86 ಸಾವಿರಕ್ಕೂ ಹೆಚ್ಚು ಹುದ್ದೆಗಳು ನೇಮಕಾತಿ ಮಾಡದೇ ನಾಡಿನ ಯುವಜನತೆ ಬೀದಿಗಿಳಿದು ಹೋರಾಟ ಮಾಡುವ ದುಸ್ಥಿತಿಗೆ ತಾವು ತಂದಿದ್ದೀರಿ. ಯುವಜನತೆ ತಮ್ಮ ಬಳಿ ಅಹವಾಲು ಮಂಡಿಸಲು ರಾಜ್ಯ ಹೈಕೋರ್ಟ್ ಮಧ್ಯಸ್ಥಿಕೆ ವಹಿಸಬೇಕಾಯಿತು ಎಂದು ಗಮನ ಸೆಳೆದರು.

ಧಾರವಾಡದಲ್ಲಿ ನ್ಯಾಯಕ್ಕಾಗಿ ಲಕ್ಷಾಂತರ ಯುವಜನತೆ ಒತ್ತಾಯಿಸಿದಾಗ ಲಾಠಿಪ್ರಹಾರ ಮಾಡಿದ್ದೀರಿ. ಯಾಕೆ ಸತ್ಯ ಮರೆಮಾಚುತ್ತಿದ್ದೀರಿ ಎಂದು ಪ್ರಶ್ನಿಸಿದರು. ಗ್ಯಾರಂಟಿಗಳಿಗೆ ಹಣ ಕ್ರೋಡೀಕರಿಸಲು ಸಾಧ್ಯವಾಗದೇ ಹೈಕೋರ್ಟಿನ ಕುಂಟು ನೆಪ, ಮೀಸಲಾತಿ ನೆಪ ಹೇಳಿಕೊಂಡು ನೇಮಕಾತಿಯನ್ನು ಮುಂದೂಡುತ್ತಿರುವುದು ತಾವಲ್ಲವೇ ಎಂದು ಮುಖ್ಯಮಂತ್ರಿಗಳನ್ನು ಪ್ರಶ್ನಿಸಿದರು.

**ಇದು ರಾಜ್ಯದ ಆರ್ಥಿಕ ಪರಿಸ್ಥಿತಿಯ ಕೈಗನ್ನಡಿಯಲ್ಲವೇ?:** ಮಂಡ್ಯ ಜಿಲ್ಲೆಯಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಕುಟುಂಬಗಳಿಗೆ ಪಿಂಚಣಿ ಕೊಡುವುದನ್ನೂ 10 ತಿಂಗಳಿಂದ ನಿಲ್ಲಿಸಿದ್ದಾರೆ. ಇದು ರಾಜ್ಯದ ಆರ್ಥಿಕ ಪರಿಸ್ಥಿತಿಯ ಕೈಗನ್ನಡಿಯಲ್ಲವೇ ಎಂದು ಪ್ರಶ್ನೆ ಹಾಕಿದರು. ಅತಿಥಿ ಉಪನ್ಯಾಸಕರಿಗೆ 2 ತಿಂಗಳಿಂದ ಸಂಬಳ ನೀಡದೇ ಇರುವುದು ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಎತ್ತಿ ತೋರಿಸುವುದಿಲ್ಲವೇ ಎಂದು ವಿಜಯೇಂದ್ರ ಪ್ರಶ್ನಿಸಿದರು.

ರಾಜ್ಯದ ಇತಿಹಾಸದಲ್ಲಿ ಮೊಟ್ಟ ಮೊದಲ ಬಾರಿಗೆ ಕಾನೂನು– ಸುವ್ಯವಸ್ಥೆ ಕಾಪಾಡುವ ಜವಾಬ್ದಾರಿ ಹೊಂದಿರುವ ಪೊಲೀಸ್ ಇಲಾಖೆಗೆ 15– 20 ದಿನ, ಒಂದು ತಿಂಗಳಾದರೂ ಸಂಬಳ ಕೊಡುವುದಕ್ಕೆ ಆಗುತ್ತಿಲ್ಲ. ಇದು ಆರ್ಥಿಕ ಪರಿಸ್ಥಿತಿ ಯಾವ ಮಟ್ಟಿಗೆ ಹೋಗಿದೆ ಎಂಬುದನ್ನು ತೋರಿಸುವುದಿಲ್ಲವೇ ಎಂದು ಕೇಳಿದರು.

ತುಂಗಭದ್ರಾ ಅಣೆಕಟ್ಟಿನ ಗೇಟ್ ಕುಸಿಯಿತು. ನಾವು ತೆಲಂಗಾಣ, ಆಂಧ್ರವನ್ನು ಕಾಯುವುದಿಲ್ಲ. ರಾಜ್ಯ ಸರಕಾರವೇ ಹಣ ಹಾಕಿ 21 ಗೇಟ್ ಕೂರಿಸಲಿದೆ ಎಂದು ಡಿ.ಕೆ.ಶಿವಕುಮಾರ್ ಅವರು ಹೇಳಿಕೆ ಕೊಟ್ಟಿದ್ದರು. ಆಂಧ್ರವು ಗೇಟ್ ದುರಸ್ತಿಗೆ ಹಣ ಕೊಟ್ಟಿತು. ಸಂಬಳಕ್ಕಾಗಿ 20 ಕೋಟಿ ಹೆಚ್ಚುವರಿಯಾಗಿ ಕೊಟ್ಟರೆ, ಆ ಹಣದಿಂದ ರಾಜ್ಯ ಸರಕಾರ ಕೊಟ್ಟ 10 ಕೋಟಿ ಹಿಂಪಡೆಯುವ ಕೆಲಸ ಮಾಡಿದೆ. ಇದು ವಾಸ್ತವಿಕ ಸತ್ಯ. ಇದನ್ನು ಅರ್ಥ ಮಾಡಿಕೊಳ್ಳಲು ಆರ್ಥಿಕ ತಜ್ಞರಾಗಬೇಕಿಲ್ಲ ಎಂದು ಮುಖ್ಯಮಂತ್ರಿಗಳ ಗಮನ ಸೆಳೆದರು.

**ಬಾಗಲಕೋಟೆಯಲ್ಲಿ 5 ದಿನ ಬಿಡಾರ ಹೂಡುವ ಪರಿಸ್ಥಿತಿ ಯಾಕೆ?**

ಅಭಿವೃದ್ಧಿ– ಗ್ಯಾರಂಟಿ ಕುರಿತು ನಿಮಗೆ ಆತ್ಮವಿಶ್ವಾಸ ಇದ್ದಿದ್ದರೆ, ಮುಖ್ಯಮಂತ್ರಿಗಳೇ ನೀವು ಬಾಗಲಕೋಟೆಯಲ್ಲಿ 5 ದಿನ ಬಿಡಾರ ಹೂಡುವ ಪರಿಸ್ಥಿತಿ ನಿರ್ಮಾಣ ಆಗುತ್ತಿರಲಿಲ್ಲ ಎಂದು ವ್ಯಂಗ್ಯವಾಡಿದರು. ಸಚಿವಸಂಪುಟದ ಪಟಾಲಂನೊಂದಿಗೆ ಸೂಟ್ ಕೇಸ್ ಹಿಡಿದುಕೊಂಡು ಕೂರುವ ದಾರಿದ್ರ್ಯ ಬರುತ್ತಿರಲಿಲ್ಲ ಎಂದು ಟೀಕಿಸಿದರು. ಈಗಲೂ ಕಾಲಮಿಂಚಿಲ್ಲ. ರಾಜ್ಯದ ಹಣಕಾಸಿನ ಪರಿಸ್ಥಿತಿ ಬಗ್ಗೆ ಶ್ವೇತಪತ್ರ ಹೊರಡಿಸಿ ಎಂದು ಒತ್ತಾಯಿಸಿದರು.

## "ಕೇಂದ್ರಕ್ಕಿಂತ ನಮ್ಮ ಆರ್ಥಿಕ ಸ್ಥಿತಿ ಉತ್ತಮವಾಗಿದೆ, ಈ ಬಗ್ಗೆ ಬಹಿರಂಗ ಚರ್ಚೆಗೆ ನಾನು ಸಿದ್ಧ": ಸಿಎಂ ಸಿದ್ದರಾಮಯ್ಯ



ಬೆಂಗಳೂರು: ರಾಜ್ಯ ಸರ್ಕಾರದ ಆರ್ಥಿಕ ಸ್ಥಿತಿ ಬಗ್ಗೆ ಶ್ವೇತಪತ್ರ ಹೊರಡಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಒತ್ತಾಯಕ್ಕೆ ಸಿಎಂ ಸಿದ್ದರಾಮಯ್ಯ ತಿರುಗೇಟು ನೀಡಿದ್ದಾರೆ. ಆರ್ಥಿಕ ಕ್ಷೇತ್ರದ ಬಗೆಗಿನ ಅವರ ಅಜ್ಞಾನ, ಆಡಳಿತದ ಅನುಭವದ ಕೊರತೆ ಮತ್ತು ರಾಜಕೀಯ ಹತಾಶೆ ತೋರಿಸುತ್ತದೆ. ಈ ಬಗ್ಗೆ ಬಹಿರಂಗ ಚರ್ಚೆಗೆ ನಾನು ಸಿದ್ಧನಿದ್ದೇನೆ, ಅವರು ಬರುತ್ತಾರೆಯೇ ಕೇಳಿನೋಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸವಾಲು ಹಾಕಿದ್ದಾರೆ.

ಕಳೆದ ತಿಂಗಳಷ್ಟೇ ಈ ಆರ್ಥಿಕ ವರ್ಷದ ಆಯವ್ಯಯಪತ್ರವನ್ನು ನಾನು ಮಂಡಿಸಿದ್ದೇನೆ, ಅದು ಅಂಕಿ–ಅಂಶಗಳ ಕಾಗದದ ಕಂತೆ ಅಲ್ಲ, ರಾಜ್ಯದ ಏಳು ಕೋಟಿ ಕನ್ನಡಿಗರಿಗೆ ಒಪ್ಪಿಸಿರುವ ಪ್ರಾಮಾಣಿಕ ಲೆಕ್ಕಪತ್ರ. ಆ ಆಯವ್ಯಯವನ್ನು ವಿಧಾನಮಂಡಲದ ಉಭಯ ಸದನಗಳು ಒಪ್ಪಿಕೊಂಡು ಅಂಗೀಕರಿಸಿವೆ. ಇದೇ ನಮ್ಮ ಶ್ವೇತಪತ್ರ ಎಂದೂ ಅವರು ಹೇಳಿದ್ದಾರೆ.

### ಅನುಮಾನವಿದ್ದರೆ ವಿವರಣೆಗೆ ಸಿದ್ಧ

ವಿಧಾನಮಂಡಲದ ಉಭಯ ಸದನಗಳಲ್ಲಿ ಕೂಲಂಕಷವಾಗಿ ಚರ್ಚೆ ನಡೆದಿದೆ. ವಿಜಯೇಂದ್ರ ಅವರ ಪಕ್ಷದವರೂ ಸೇರಿ 21 ಜನ ವಿರೋಧ ಪಕ್ಷದ ಸದಸ್ಯರೂ ಮಾತನಾಡಿ ಎತ್ತಿದ್ದ ಪ್ರಶ್ನೆಗಳಿಗೆ ಸೂಕ್ತ ಉತ್ತರ ನೀಡಿದ್ದೇನೆ. ಇದರ ಬಗ್ಗೆ ಇನ್ನೂ ನಿಮಗೆ ಅನುಮಾನಗಳಿದ್ದರೆ ವಿವರಣೆ ಕೊಡಲು ನಾನು ಸಿದ್ಧನಿದ್ದೇನೆ. ಉಪಚುನಾವಣೆ ಅಖಾಡದಲ್ಲಿಯೇ ನಿಮ್ಮ ಜೊತೆ ಬಹಿರಂಗ ಚರ್ಚೆಗೂ ನಾನು ಸಿದ್ಧ. ದಯವಿಟ್ಟು ಕೇವಲ ರಾಜಕೀಯ ಮಾತನಾಡಬೇಕೆಂಬ ಬಾಯಿ ಚಪಲಕ್ಕಾಗಿ ಆಯವ್ಯಯ ಪತ್ರದ ಪಾವಿತ್ರ್ಯ ಹಾಳು ಮಾಡಲು ಹೋಗಬೇಡಿ ಎಂದಿದ್ದಾರೆ.

## ಗೋಕಾಕನಲ್ಲಿ ಶ್ರೀರಾಮನವಮಿ ನಿಮಿತ್ತ ಶ್ರೀರಾಮನಾಮ ಜಪ ಹಾಗೂ ರಾಮರಾಜ್ಯಕ್ಕಾಗಿ ಪ್ರತಿಜ್ಞೆ




**ಬೆಳಗಾವಿ ವಾರ್ತೆ ಗೋಕಾಕ :** ಶ್ರೀರಾಮನವಮಿ ನಿಮಿತ್ತ ಹಿಂದೂ ಜನಜಾಗೃತಿ ಸಮಿತಿ ವತಿಯಿಂದ ಗೋಕಾಕಿನ ಶ್ರೀ ನಗರದ ಮಾರುತಿ ಮಂದಿರದಲ್ಲಿ ಮತ್ತು ಇನ್ನೂ ಹಲವು ದೇವಸ್ಥಾನಗಳಲ್ಲಿ ಶ್ರೀ ರಾಮ ನಾಮಜಪ, ಪ್ರಾರ್ಥನೆ ಹಾಗೂ ರಾಮರಾಜ್ಯ ಸ್ಥಾಪನೆಗಾಗಿ ಪ್ರತಿಜ್ಞೆ ಮಾಡಿ ಕಾರ್ಯಕ್ರಮವನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಭಕ್ತಾದಿಗಳು ಮತ್ತು ಧರ್ಮಪ್ರೇಮಿಗಳು ಹಾಗೂ ಹಿಂದೂ ಜನಜಾಗೃತಿ ಸಮಿತಿಯ ಕಾರ್ಯಕರ್ತರು ಭಾಗವಹಿಸಿ ಶ್ರೀರಾಮನ ನಾಮಜಪ ಮಾಡಿದರು. ಸಮಾಜದಲ್ಲಿ ಧರ್ಮ, ಸತ್ಪ್ರವೃತ್ತಿ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ಬಲಪಡಿಸುವ ಸಂಕಲ್ಪವನ್ನು ಎಲ್ಲರೂ ಕೈಗೊಂಡರು.

ಈ ಸಂದರ್ಭದಲ್ಲಿ ರಾಮರಾಜ್ಯ ಸ್ಥಾಪನೆಗೆ ಅಗತ್ಯವಾದ ಸತ್ಸಂಕಲ್ಪಗಳನ್ನು ಪಾಲಿಸುವುದಾಗಿ ಪ್ರತಿಜ್ಞೆ ಮಾಡಲಾಯಿತು.

ಶ್ರೀರಾಮನವಮಿಯು ಚೈತ್ರ ಮಾಸದ ಶುಕ್ಲ ಪಕ್ಷದ ನವಮಿಯಂದು ಆಚರಿಸಲಾಗುತ್ತದೆ. ಈ ದಿನವನ್ನು ಶ್ರೀವಿಷ್ಣುವಿನ ಏಳನೇ ಅವತಾರವಾದ ಶ್ರೀರಾಮನ ಜನ್ಮದಿನವೆಂದು ಭಕ್ತರು ಪರಿಗಣಿಸುತ್ತಾರೆ. ರಾಮನು ಸತ್ಯ, ಧರ್ಮ, ಕರ್ತವ್ಯನಿಷ್ಠೆ ಮತ್ತು ಆದರ್ಶ ಜೀವನದ ಪ್ರತೀಕವಾಗಿದ್ದು, ರಾಮಾಯಣದಲ್ಲಿ ಶ್ರೀರಾಮನ ಜೀವನ ಮೌಲ್ಯಗಳು ವಿವರಿಸಲ್ಪಟ್ಟಿವೆ. ರಾಮರಾಜ್ಯವು ನ್ಯಾಯ, ಸಮಾನತೆ ಮತ್ತು ಸುಖಶಾಂತಿಯ ಸಂಕೇತವಾಗಿದ್ದು, ಇಂತಹ ಆದರ್ಶ ಸಮಾಜ ನಿರ್ಮಾಣವಾಗಲು ಶ್ರೀ ರಾಮ ರಾಜ್ಯದಂತಹ ಹಿಂದೂ ರಾಷ್ಟ್ರ ಸ್ಥಾಪನೆಗಾಗಿ ಪ್ರಾರ್ಥನೆ ಮಾಡಲಾಯಿತು.



ಗೋಕಾಕ: ಕುಡಿಯುವ ನೀರಿನ ಉದ್ದೇಶದಿಂದ ಹಿಡಕಲ್ ಜಲಾಶಯದಿಂದ ನೀರು ಹರಿಬಿಟ್ಟ ಹಿನ್ನಲೆ ಗೋಕಾಕ ಜಲಪಾತ ಹಾಲ್ನೊರೆಯಂತೆ ಹರಿಯುತ್ತಿದೆ.

## ವಾಣಿಜ್ಯ ಸಿಲಿಂಡರ್ ಬೆಲೆ ಮತ್ತೆ ಏರಿಕೆ

ನವದೆಹಲಿ: ವಾಣಿಜ್ಯ ಬಳಕೆಯ ಸಿಲಿಂಡರ್ ಕೊರತೆ ನಡುವೆಯೇ ವಾಣಿಜ್ಯ ಬಳಕೆಯ ಸಿಲಿಂಡರ್ ಬೆಲೆ 195 ರೂ. 50 ಪೈಸೆ ಹೆಚ್ಚಳವಾಗಿದ್ದು, ವಿಮಾನಕ್ಕೆ ಬಳಸುವ ಇಂಧನ(ಎಟಿಎಫ್) ಬೆಲೆಯನ್ನು ಏರಿಕೆ ಮಾಡಲಾಗಿದೆ.

ಇದರಿಂದ ವಿಮಾನ ಪ್ರಯಾಣ ದರವು ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ.

ವಾಣಿಜ್ಯ ಸಿಲಿಂಡರ್ ಬಳಕೆಯಿಂದ ಈಗಾಗಲೇ ಸಿಲಿಂಡರ್ ಕೊರೆತಯಿಂದ ಸಂಕಷ್ಟಕ್ಕೆ ಸಿಲುಕಿರುವ ಆತಿಥ್ಯ ಉದ್ಯಮಕ್ಕೆ ಮತ್ತಷ್ಟು ಹೊಡೆತ ಬಿದ್ದಿದ್ದು ಹೋಟೆಲ್ ತಿಂಡಿ ತಿನಿಸುಗಳ ಬೆಲೆ ಏರಿಕೆ ಬಿಸಿ ಗ್ರಾಹಕರಿಗೆ ತಟ್ಟಲಿದೆ.

ದೇಶಾದ್ಯಂತ ವಾಣಿಜ್ಯ ಸಿಲಿಂಡರ್ ಗಳಿಗೆ ಅಭಾವ ತಲೆದೋರಿರುವಾಗಲೇ ಸರ್ಕಾರಿ ಸ್ವಾಮ್ಯದ ತೈಲ ಮಾರಾಟ ಕಂಪನಿಗಳು ವಾಣಿಜ್ಯ ಬೆಲೆಯ ಸಿಲಿಂಡರ್ ಬೆಲೆಯನ್ನು 195.50 ಹೆಚ್ಚಳ ಮಾಡಿದ್ದು, ವಾಣಿಜ್ಯ ಸಿಲಿಂಡರ್ 19ಕೆಜಿ ತೂಕದ ವಾಣಿಜ್ಯ ಬಳಕೆಯ ದೆಹಲಿಯಲ್ಲಿ 2078. 50 ಪೈಸೆಗೆ ತಲುಪಿದೆ. ಗೃಹ ಬಳಕೆಯ ಸಿಲಿಂಡರ್ ಬೆಲೆ ಏರಿಕೆಯಾಗಿಲ್ಲ.

ಸರ್ಕಾರಿ ಸೌಮ್ಯದ ತೈಲ ಮಾರಾಟ ಕಂಪನಿಗಳಾದ ಭಾರತ್ ಪೆಟ್ರೋಲಿಯಿಂ, ಹಿಂದೂಸ್ತಾನ್ ಪೆಟ್ರೋಲಿಯಂ ಇಂಡಿಯನ್ ಆಯಿಲ್ ಕಾರ್ಪೋರೇಷನ್‌ಗಳು ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಇಂಧನ ದರ ವಿದೇಶಿ ವಿನಿಮಯ ದರಕ್ಕಗನುಗುಣವಾಗಿ ಪ್ರತಿ ತಿಂಗಳ ಮೊದಲ ದಿನ ಎಲ್‌ಪಿಜಿ ಮತ್ತು ಪ್ರೀಮಿಯರ್ ಪೆಟ್ರೋಲಿಯಂ ದರಗಳನ್ನು ಪರಿಷ್ಕರಿಸುತ್ತದೆ. ಅದರಂತೆ ಇಂದು ವಿಮಾನ ಬಳಕೆಯ ಪ್ರೀಮಿಯಂ ಪೆಟ್ರೋಲ್ ಮತ್ತು ವಾಣಿಜ್ಯ ಬಳಕೆಯ ಸಿಲಿಂಡರ್ ದರವನ್ನು ಏರಿಕೆ ಮಾಡಲಾಗಿದೆ.

ಕಳೆದ ಮಾರ್ಚ್ 1 ರಂದು ಗೃಹ ಬಳಕೆಯ ಸಿಲಿಂಡರ್ ಬೆಲೆಯನ್ನು 60 ರೂ. ಮತ್ತು ವಾಣಿಜ್ಯ ಬಳಕೆಯ ಸಿಲಿಂಡರ್ ದರವನ್ನು 114.50 ಪೈಸೆ ಹೆಚ್ಚಿಸಲಾಗಿತ್ತು. ಈಗ ಮತ್ತೆ ವಾಣಿಜ್ಯ ಬಳಕೆಯ ಸಿಲಿಂಡರ್ ಬೆಲೆ ಏರಿಕೆಯಾಗಿದೆ.

ವಿಮಾನಗಳಿಗೆ ಬಳಸುವ ಇಂಧನ ಬೆಲೆಯನ್ನು ಏರಿಕೆ ಮಾಡಲಾಗಿದ್ದು, ಪ್ರತಿ ಕಿಲೋ ಲೀಟರ್ (1 ಸಾವಿರ ಲೀಟರ್) ವಿಮಾನ ಇಂಧನ ಬೆಲೆ ದಾಖಲೆಯ 2 ಲಕ್ಷ ರೂ. ದಾಟಿದೆ. ವಿಮಾನ ಬಳಕೆಯ ಪೆಟ್ರೋಲ್ ದರ ಏರಿಕೆಯಿಂದ ವಿಮಾನ ಪ್ರಯಾಣ ದರಗಳು ಮತ್ತಷ್ಟು ತುಟ್ಟಿಯಾಗುವ ಸಾಧ್ಯತೆಗಳಿವೆ. ವಿಮಾನ ಕಾರ್ಯಾಚರಣೆಯ ಒಟ್ಟು ವೆಚ್ಚದ ಶೇ. 40 ರಷ್ಟು ಇಂಧನಕ್ಕೆ ವೆಚ್ಚವಾಗುತ್ತದೆ.

ಮಧ್ಯಪ್ರಾಚ್ಯದ ಕೆಲವು ದೇಶಗಳ ವಾಯು ಪ್ರದೇಶ ಮುಚ್ಚಿರುವುದರಿಂದ ಪಶ್ಚಿಮ ಏಷ್ಯಾದ ಹಲವು ನಗರಗಳಲ್ಲಿ ವಿಮಾನ ಹಾರಾಟ ನಡೆಸಲು ಬೇರೆ ಮಾರ್ಗಗಳನ್ನು ಬಳಸುತ್ತಿರುವುದರಿಂದ ವಿಮಾನಯಾನ ಸಂಸ್ಥೆಗಳಿಗೆ ಹೆಚ್ಚನ ಇಂಧನ ಖರ್ಚಾಗುತ್ತಿದೆ. ಈಗ ಈ ಪ್ರೀಮಿಯಂ ಪೆಟ್ರೋಲ್ ಬೆಲೆ ಏರಿಕೆಯಿಂದಾಗಿ ವಿಮಾನಯಾನ ಕಂಪನಿಗಳಿಗೆ ಮತ್ತಷ್ಟು ಹೊರೆಯಾಗಲಿದೆ.



### ಪ್ರಿಮಿಯಮ್ ಪೆಟ್ರೋಲ್ ದರ ಏರಿಕೆ

ಇಂಡಿಯನ್ನ ಆಯಿಲ್ ಕಾರ್ಪೋರೇಷನ್ ತನ್ನ ಪ್ರಿಮಿಯಮ್ ಪೆಟ್ರೋಲ್ ದರವನ್ನು ಪ್ರತಿ ಲೀಟರ್‌ಗೆ 11 ರೂಗಳನ್ನು ಏರಿಕೆ ಮಾಡಿದೆ. ಸಾಮಾನ್ಯ ಪೆಟ್ರೋಲ್,ಡಿಸೆಲ್ ದರಗಳು ಏರಿಕೆಯಾಗಿಲ್ಲ

## ಹಿಂದಿ ಹೇರಿಕೆ ವಿರುದ್ಧ ಹೋರಾಟಕ್ಕೆ ಕರೆ

ಬೆಂಗಳೂರು: ಹಿಂದಿ ಹೇರಿಕೆ ವಿರುದ್ಧ ರಾಜ್ಯದಲ್ಲಿ ತೀವ್ರ ಹೋರಾಟ ಆರಂಭಿಸಲು ಹಿಂದಿ ಹೇರಿಕೆ ವಿರೋಧಿ ಕರ್ನಾಟಕ ಸಂಘಟನೆ ಮುಂದಾಗಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕನ್ನಡ ಚಳುವಳಿ ನಾಯಕ ಸಾರಾ ಗೋವಿಂದ್, ಕೇಂದ್ರ ಸರ್ಕಾರ ಹಿಂದಿ ಭಾಷೆಯನ್ನು ದೇಶದ ಮೇಲೆ ಹೇರಲು ನಡೆಸುತ್ತಿರುವ ಪ್ರಯತ್ನಗಳನ್ನು ತೀವ್ರವಾಗಿ ಖಂಡಿಸಿ, ರಾಜ್ಯಗಳ ಭಾಷಾ ವೈವಿಧ್ಯತೆ ಹಾಗೂ ಸಂವಿಧಾನದ ಆತ್ಮಕ್ಕೆ ವಿರುದ್ಧವಾಗಿ ನಡೆಯುತ್ತಿರುವ ಈ ಕ್ರಮಗಳು ಅಸ್ವೀಕಾರಾರ್ಹವೆಂದು ಎಂದು ಹೇಳಿದರು.

ಹಿಂದಿ ಹೇರಿಕೆಯಿಂದ ಪ್ರಾದೇಶಿಕ ಭಾಷೆಗಳ ಅಭಿವೃದ್ಧಿಗೆ ಧಕ್ಕೆಯಾಗುವುದರ ಜೊತೆಗೆ, ಸ್ಥಳೀಯ ಜನರ ಶಿಕ್ಷಣ ಮತ್ತು ಉದ್ಯೋಗಾವಕಾಶಗಳ ಮೇಲೂ ಪರಿಣಾಮ ಬೀರುತ್ತದೆ ಎಂದು ಸಂಘಟನೆ ಆತಂಕ ವ್ಯಕ್ತಪಡಿಸಿದೆ. ಕನ್ನಡ ಭಾಷೆಯ ಗೌರವವನ್ನು ಕಾಪಾಡಲು ರಾಜ್ಯದ ಜನರು ಒಗ್ಗೂಡಿ ಹೋರಾಟ ನಡೆಸಬೇಕೆಂದು ಮನವಿ ಮಾಡಿದರು.

ಇದಕ್ಕೆ ಸಂಬಂಧಿಸಿದಂತೆ ವಿವಿಧ ಸಂಘಟನೆಗಳು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೋರಾಟಕ್ಕೆ ಬೆಂಬಲ ನೀಡುವಂತೆ ಕರೆ ನೀಡಲಾಗಿದೆ. ರಾಜ್ಯದ ಎಲ್ಲೆಡೆ ಜಾಗೃತಿ ಕಾರ್ಯಕ್ರಮಗಳು, ಪ್ರತಿಭಟನೆಗಳು ಮತ್ತು ಚಳುವಳಿಗಳನ್ನು ನಡೆಸುವ ಮೂಲಕ ಹಿಂದಿ ಹೇರಿಕೆಯನ್ನು ತಡೆಯುವ ಸಂಕಲ್ಪವನ್ನು ವ್ಯಕ್ತಪಡಿಸಲಾಗಿದೆ.ಸಂಘಟನೆಯ ಪದಾಧಿಕಾರಿಗಳು ಸಹಿ ಹಾಕಿರುವ ಈ ಪತ್ರದಲ್ಲಿ, ಭಾಷಾ ವೈವಿಧ್ಯತೆಯನ್ನು ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯೆಂದು ತಿಳಿಸಲಾಗಿದೆ ಎಂದು ಒಕ್ಕೂಟದ ಅಧ್ಯಕ್ಷ ಸಾರಾ ಗೋವಿಂದ್ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಕರವೇ ಶಿವರಾಮೆಗೌಡ ಪಾರ್ವತಿ ಬಿಳಿದಾಳೆ ಆಶ್ವತ್ ಎಂ,ಬಸವರಾಜ ಪಡುಕೋಟೆ ಇತರರು ಇದ್ದರು.



# ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಲು ಅಧಿಕಾರಿಗಳಿಗೆ ಸೂಚನೆ: ಡಾ.ನಾಗಲಕ್ಷ್ಮಿ ಚೌಧರಿ



**ಬೆಳಗಾವಿ ವಾರ್ತೆ ಅಥಣಿ:** ಸಮಾಜದಲ್ಲಿ ಪುರುಷರು ತಮ್ಮ ಮನೆಯ ಹೆಣ್ಣುಮಕ್ಕಳಿಗೆ ನೀಡುವಷ್ಟೇ ಗೌರವವನ್ನು ಇತರ ಮಹಿಳೆಯರಿಗೂ ನೀಡಿದಾಗ ಮಾತ್ರ ಒಂದು ಸುಸಂಸ್ಕೃತ ಕುಟುಂಬ ಮತ್ತು ಸಮಾಜ ನಿರ್ಮಾಣ ಸಾಧ್ಯ, ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷ ಡಾ. ನಾಗಲಕ್ಷ್ಮಿ ಚೌಧರಿ ಪ್ರತಿಪಾದಿಸಿದರು.

ಪಟ್ಟಣದ 'ಭರವಸೆ ಬೆಳಕು ಫೌಂಡೇಶನ್' ವತಿಯಿಂದ ಆಯೋಜಿಸಲಾಗಿದ್ದ ಮಹಿಳಾ ದಿನಾಚರಣೆ ಹಾಗೂ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮದಲ್ಲಿ ಮಾತನಾಡಿ ನಾನು ಕೂಡ ಅಂತರಜಾತಿ ವಿವಾಹವಾಗಿದ್ದು, ಬಸವಣ್ಣನವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡಿದ್ದೇನೆ ನಾವೆಲ್ಲರೂ ಬಸವ ತತ್ವಗಳನ್ನು ಪಾಲಿಸಿದರೆ ಕರ್ನಾಟಕವು ವಿಶ್ವಕ್ಕೆ ಮಾದರಿಯಾಗಬಲ್ಲದು ಇಂದು ಮಹಿಳೆಯರು ಕಾನೂನು ಹೋರಾಟಗಳಲ್ಲಿ ತೊಡಗಿಸಿಕೊಳ್ಳಲು ಡಾ. ಬಿ.ಆರ್. ಅಂಬೇಡ್ಕರ್ ಅವರು ನೀಡಿದ ಸಂವಿಧಾನವೇ ದೊಡ್ಡ ಶಕ್ತಿಯಾಗಿದೆ, ಎಂದರು.

ಇದೇ ಸಂದರ್ಭದಲ್ಲಿ ಮಹಿಳೆಯರ ಸಮಸ್ಯೆಗಳ ಕುರಿತು ಗಂಭೀರ ಚರ್ಚೆ ನಡೆಸಿದ ಅವರು, ಸ್ಥಳೀಯ ಮಹಿಳೆಯರಿಂದ ಅಹವಾಲುಗಳನ್ನು ಸ್ವೀಕರಿಸಿದರು. ಸರ್ಕಾರಿ ವಿವಿಧ ಇಲಾಖೆಗಳಲ್ಲಿನ ಲೋಪದೋಷಗಳ ಬಗ್ಗೆ ಬಂದ ದೂರುಗಳಿಗೆ ಸಂಬಂಧಿಸಿದಂತೆ ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿ, ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಕೆಲಸ ಮಾಡಲು ಸೂಚಿಸಿದರು.

ಈ ವೇಳೆ ಭರವಸೆ ಬೆಳಕು ಫೌಂಡೇಶನ್ ಅಧ್ಯಕ್ಷರಾದ ರೂಪಾ ಕಾಂಬಳೆ, ತಾಲೂಕಾ ದಂಡಾಧಿಕಾರಿ ಸಿದರಾಯು ಭೋಸಗಿ, ತಾಲೂಕು ಪಂಚಾಯತ ಇ ಒ ಶಿವಾನಂದ ಕಲ್ಲಾಪುರ, ಪಿಎಸ್ಐ ಜಿ ಎಸ್ ಉಪ್ಪಾರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ಮಂಜುನಾಥ ಸೌಂದಲಗೇಕರ ತಾಲೂಕು ವೈದ್ಯಾಧಿಕಾರಿ ಬಸಗೌಡ ಕಾಗೆ, ಹಿಂದುಳಿದ ವರ್ಗಗಳ ಇಲಾಖೆ ಅಧಿಕಾರಿ ವೆಂಕಟೇಶ ಕುಲಕರ್ಣಿ,ಪುರಸಭೆ ಅಧ್ಯಕ್ಷೆ ಶಿವಲೀಲಾ ಬೂಟಾಳಿ,ಸವಿತಾ ಕಾಂಬಳೆ, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ನುರಾರು ಅಂಗನವಾಡಿ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಶರಣೆ ಅಕ್ಕಮಹಾದೇವಿಯವರ ವಚನಗಳು ಮಹಿಳೆಯರಿಗೆ ದಾರಿದೀಪವಾಗಿದ್ದು ಅವುಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಆಚರಣೆಗೆ ತನ್ನಿ

**ಬೆಳಗಾವಿ ವಾರ್ತೆ ಗೋಕಾಕ:** ಶರಣೆ ಅಕ್ಕಮಹಾದೇವಿ ಯವರ ವಚನಗಳು ಮಹಿಳೆಯರಿಗೆ ದಾರಿದೀಪವಾಗಿದ್ದು ಅವುಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಆಚರ ಣೆಗೆ ತರುವಂತೆ ಶ್ರೀಮತಿ ಅಮೃತ್ತಮ್ಮ ಮುನವಳ್ಳಿಯವರು ಹೇಳಿದರು.



ಅವರು, ಮಂಗಳವಾರದಂದು ಸಂಜೆ ಕರ್ನಾಟಕ ರಾಜ್ಯ ಬಣಜೀಗ ಸಮಾಜದ ಕ್ಷೇಮಾಭಿವೃದ್ಧಿ ಸಂಘ ಮಹಿಳಾ ಘಟಕ ಗೋಕಾಕ ಇವರು ಆಯೋಜಿಸಿದ್ದ ಶಿವಶರಣೆ ಅಕ್ಕ ಮಹಾದೇವಿ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತ ತಮ್ಮ ವಚನಗಳ ಮೂಲಕ ಧರ್ಮ ಜಾಗೃತಿ ಮೂಡಿಸಿ ಸ್ತ್ರೀ ಸ್ವಾತಂತ್ರಕ್ಕೆ ಬೂನಾಧಿ ಹಾಕಿದ ಪ್ರಥಮ ಶರಣೆಯಾಗಿದ್ದಾರೆ ಎಂದರು.

ಉಪನ್ಯಾಸಕರಾಗಿ ಆಗಮಿಸಿದ್ದ ಜ್ಞಾನ ಮಂದಿರದ ಧರ್ಮದರ್ಶಿ ಸುವರ್ಣಾ ತಾಯಿ ಹೊಸಮಠ ಮಾತನಾಡುತ್ತ ಮಹಿಳೆಯರಲ್ಲಿ ಅಗಾದ ಶಕ್ತಿ ಇದ್ದು ಕುಟುಂಬ ನಿರ್ವಹಣೆಯಲ್ಲಿ ಅಪರ ಪಾತ್ರ ಮಹತ್ವದ್ದಾಗಿದೆ. ತಾಯಂದಿರು ತಮ್ಮ ಮಕ್ಕಳಿಗೂ ಉತ್ತಮ ಸಂಸ್ಕಾರ ನೀಡಿ. ಇಂದು ಮಹಿಳೆ ಎಲ್ಲ ಕ್ಷೇತ್ರಗಳಲ್ಲಿಯೂ ಮಾದರಿಯಾಗಿ ಕಾರ್ಯನಿರ್ವಹಿಸುತ್ತಿದ್ದು ಇದಕ್ಕೆ ಶರಣೆ ಅಕ್ಕಮಹಾದೇವಿಯವರೇ ಪ್ರೇರಣೆಯಾಗಿದ್ದಾರೆಂದರು.

ವೇದಿಕೆಯ ಮೇಲೆ ಬೆಂಗಳೂರಿನ ಬಸವ ಧರ್ಮ ಪೀಠದ ವಿಜಯಾಂಬಿಕಾ ಮಾತಾಜಿ, ಮಹಿಳಾ ಘಟಕದ ಅಧ್ಯಕ್ಷೆ ಮಹಾದೇವಿ ಉಪ್ಪಿನ, ಕಾರ್ಯದರ್ಶಿ ಹರ್ಷಿತಾ ಸವಣೂರ, ಉಪಾಧ್ಯಕ್ಷೆ ದೀಪಾ ಬೆಲ್ಲದ ಇದ್ದರು.

# ಸಂಭ್ರಮದಿಂದ ಜರುಗಿದ ಶ್ರೀ ರೇಣುಕಾ ಯಲ್ಲಮ್ಮಾದೇವಿ ಜಾತ್ರೆ

**ಬೆಳಗಾವಿ ವಾರ್ತೆ ಮೂಡಲಗಿ :** ಪಟ್ಟಣದಲ್ಲಿ ಶ್ರೀ ಶಿವಬೋಧರಂಗ ಮಠದ ರಸ್ತೆಯಲ್ಲಿನ ಶ್ರೀ ರೇಣುಕಾ ಯಲ್ಲಮ್ಮಾದೇವಿ ದೇವ ಸ್ಥಾನ ದಲ್ಲಿ ಶ್ರೀ ರೇಣುಕಾ ಯಲ್ಲಮ್ಮಾ ದೇವಿ ಜಾತ್ರಾ ಮಹೋತ್ಸವ ಬುಧವಾರ ಜರುಗಿತು

ಜಾತ್ರೆಯ ನಿಮಿತ್ಯ ಮುಂಜಾನೆ 6.00 ಗಂಟೆಗೆ ಶ್ರೀ ದೇವಿಗೆ ವಿಶೇಷ ಅಭಿಷೇಕ ಮತ್ತು 8.00 ಗಂಟೆಯಿಂದ 10.00ರ ವರೆಗೆ ದೇವಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಿತು. ಪಟ್ಟಣದ ಸಂಗಪ್ಪಣ್ಣ ವೃತ್ತ, ಕಲ್ಮೇಶ್ವರ ವೃತ್ತ, ಚನ್ನಮ್ಮ ವೃತ್ತ, ಕರೆಮ್ಮದೇವಿ ವೃತ್ತ ಮತ್ತು ಬಸವೇಶ್ವರ ವೃತ್ತ ಮೂಲಕ ಕುಂಭ ಮೇಳ ಮತ್ತು ವಾದ್ಯಮೇಳದೊಂದಿಗೆ ದೇವಿಯ ಉತ್ಸವ ಮೆರವಣಿಗೆ ಜರುಗಿತು.



ಮಧ್ಯಾಹನ ದೇವಿಗೆ ದಂಡಿ ದಾರಣ ಮಾಡುವುದು ಮತ್ತು ಹಡ್ಡಲಗಿ ತುಂಬುವುದು.ಮತ್ತು ಅನ್ನ ಪ್ರಸಾದ ಜರುಗಿತು.

# ಹುಬ್ಬಳ್ಳಿ–ಬೆಂಗಳೂರು–ಹೈದರಾಬಾದ್ ಮಧ್ಯೆ ಶೀಘ್ರ ವಿಮಾನಯಾನ ಸೇವೆ

ನವದೆಹಲಿ: ವಾಣಿಜ್ಯ ನಗರಿ ಹುಬ್ಬಳ್ಳಿ–ಧಾರವಾಡ ಸೇರಿದಂತೆ ಉತ್ತರ ಕರ್ನಾಟಕ, ಮಧ್ಯ ಕರ್ನಾಟಕ ತ್ವರಿತ ಸಂಪರ್ಕಕ್ಕೆ ಅನುಕೂಲ ಆಗುವಂತೆ "ಹುಬ್ಬಳ್ಳಿ–ಬೆಂಗಳೂರು–ಹೈದರಾಬಾದ್" ನಡುವೆ ಅತಿ ಶೀಘ್ರದಲ್ಲೇ ಹೊಸದೊಂದು ವಿಮಾನ ಸೇವೆ ಲಭ್ಯವಾಗಲಿದೆ.

ಇದೇ ಏಪ್ರಿಲ್ ಎರಡನೇ ವಾರದಿಂದಲೇ fly91 ವಿಮಾನ ಸೇವೆ ಆರಂಭವಾಗಲಿದ್ದು, ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ ಸಂಸ್ಥೆಗೆ ಕಾರ್ಯಕ್ಕೆ ಸ್ಥಳಾವಕಾಶ ನೀಡಲಾಗಿದೆ. ಅಂತೆಯೇ fly91 ಸಂಸ್ಥೆ ಈಗಾಗಲೇ ವಿಮಾನಯಾನ ಸೇವೆಯ ಅಗತ್ಯ ಕಾರ್ಯ ಚಟುವಟಿಕೆ ಸಹ ಆರಂಭಿಸಿದೆ.

**ಸಚಿವ ಜೋಶಿ ಮನವಿಗೆ ಸ್ಪಂದನೆ:** ಹುಬ್ಬಳ್ಳಿಯಿಂದ ಬೆಂಗಳೂರು ಮತ್ತು ಹೈದರಾಬಾದ್ ತೆರಳುವ ನಾಗರಿಕರಿಗೆ ತ್ವರಿತ ಪ್ರಯಾಣಕ್ಕೆ ಅನುಕೂಲ ಆಗುವಂತೆ



ವಿಮಾನ ಸೇವೆ ಆರಂಭಿಸುವಂತೆ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರು ಈ ಹಿಂದೆ ಏರ್‌ಲೈನ್ಸ್ ಅಧಿಕಾರಿಗಳೊಂದಿಗೆ ಚರ್ಚಿಸಿ ಗಮನ ಸೆಳೆದಿದ್ದರು. ಅದರಂತೆ fly91 ಸಂಸ್ಥೆ ಇದೀಗ ಈ ಮಾರ್ಗದಲ್ಲಿ ವಿಮಾನಯಾನಕ್ಕೆ ಅಣಿಯಾಗಿದೆ.

ಏಪ್ರಿಲ್ ಎರಡನೇ ವಾರದಿಂದಲೇ ಈ ಮಾರ್ಗದ ವಿಮಾನಯಾನ ಸೇವೆ ನಾಗರಿಕರಿಗೆ ಲಭ್ಯವಾಗಲಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಮಾಹಿತಿ ಹಂಚಿಕೊಂಡಿದ್ದಾರೆ.

ಸಚಿವ ಜೋಶಿ ಅವರ ಮನವಿ ಪುರಸ್ಕರಿಸಿದ fly91 ಸಂಸ್ಥೆ ಹುಬ್ಬಳ್ಳಿ–ಬೆಂಗಳೂರು–ಹೈದರಾಬಾದ್ ಮಧ್ಯೆ ವಿಮಾನ ಹಾರಾಟಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ್ದು, HYD to HBX: IC3401; 3:00 PM – 4:30 PM HBX to BLR: IC3411; 4:55 PM – 6:15 PM BLR to HBX: IC3412; 6:45 PM – 8:15 PM HBX to HYD: IC3402; 8:35 PM – 9:55 PM ವಿಮಾನಯಾನ ಸೇವೆಯ ವೇಳಾಪಟ್ಟಿ ಸಹ ಬಿಡುಗಡೆ ಮಾಡಿದೆ.

ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ ಈಗಾಗಲೇ ಈ ಸಂಸ್ಥೆಗೆ ಕಾರ್ ನಿರ್ವಹಿಸಲು ಸ್ಥಳ ಸಹ ನೀಡಲಾಗಿದ್ದು, ಸಂಸ್ಥೆಯು ಅವಶ್ಯಕ ಕಾರ್ಯಗಳನ್ನು ಪ್ರಾರಂಭಿಸಿದೆ.



ಸತ್ತೂರಿನ ವನಸರಿ ನಗರದಲ್ಲಿ ನಾರಾಯಣ ಪಾರಾಯಣ ಬಳಗದ ಆಶ್ರಯದಲ್ಲಿ ಹನುಮ ಜಯಂತಿಯ ಪ್ರಯುಕ್ತ ತೊಟ್ಟಿಲೋತ್ಸವ ಸಮಾರಂಭ, ಉಪನ್ಯಾಸ ನಡೆಯಿತು. ಕಾರ್ಯಕ್ರಮದಲ್ಲಿ ಹನಮಂತ ಬಿಜಾಪುರ, ವಿಠ್ಠಲ ಅಂಬೇಕರ, ರಘೋತ್ತಮ ಅವಧಾನಿ, ಡಾ. ಶ್ರೀನಾಥ, ವೆಂಕಟೇಶ ಕುಲಕರ್ಣಿ,ಹನುಮಂತ ಪುರಾಣಿಕ, ಸಂಜೀವ ಗೋಳಸಂಗಿ ಸಂಜೀವ ಜೋಶಿ, ಆನಂದ ದೇಶಪಾಂಡೆ ಕೇಶವ ಕುಲಕರಣಿ, ಎಂ ಆರ್. ಕಲ್ಕೋಟಿ, ಶ್ರೀನಿವಾಸ ಪಟ್ಟನಕೊಡಿ ಪಾಂಡುರಂಗ ಕುಲಕರ್ಣಿ ಡಾ. ರವಿ ಧೂಮವಾಡ ಅಣ್ಣಿಗೇರಿ ಅಶೋಕ್ ಕುಲಕರ್ಣಿ ಕೃಷ್ಣ ಹುನಗುಂದ ವಿಲಾಸ ಉಪಸ್ಥಿತರಿದ್ದರು.



ಮುನವಳ್ಳಿ ಪಟ್ಟಣದ ಶ್ರೀ ಸಾಯಿ ಮಂದಿರದಲ್ಲಿ ಶ್ರೀ ರಾಮನವಮಿ ಅಂಗವಾಗಿ ರುದ್ರಾಭಿಷೇಕ, ವಿಷೇಶ ಅಲಂಕಾರ ಪೂಜೆ, ಆರತಿ, ಪಲ್ಲಕ್ಕಿ ಉತ್ಸವ ಭಜನೆ ಹಾಗೂ ಶ್ರೀ ರಾಮನ ತೊಟ್ಟಿಲೋತ್ಸವ, ಮಹಾಮಂಗಳಾರತಿ ಹಾಗೂ ಮಹಾಪ್ರಸಾದ ನಡೆಯಿತು.

# ಸಾರ್ವಜನಿಕರು ಸ್ವಯಂಪ್ರೇರಿತರಾಗಿ ಪಾಲ್ಗೊಳ್ಳಲು ಮತ್ತು ಮನೆಗೆ ಭೇಟಿ ನೀಡಿದ ಗಣತಿದಾರರಿಗೆ ಮಾಹಿತಿ ನೀಡುವುದರೊಂದಿಗೆ ಜನಗಣತಿ ಕಾರ್ಯವನ್ನು ಯಶಸ್ವಿಗೊಳಿಸಲು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಮನವಿ

**ಬೆಳಗಾವಿ ವಾರ್ತೆ ಧಾರವಾಡ:** ಜಿಲ್ಲೆಯಲ್ಲಿ ಸ್ವಯಂ ಗಣತಿ ಕಾರ್ಯವು ಏಪ್ರಿಲ್ 1 ರಿಂದ ಏಪ್ರಿಲ್ 15, 2026 ರವರೆಗೆ ಜರುಗಲಿದ್ದು, ಸಾರ್ವಜನಿಕರು ತಮ್ಮ ಮೊಬೈಲ್ ಮೂಲಕ ಸ್ವಯಂ ಗಣತಿಯನ್ನು ನಿರ್ವಹಿಸುವ ಮೂಲಕ ತಮ್ಮ ಕುಟುಂಬದ ಜನಗಣತಿ ಮಾಹಿತಿಯನ್ನು ದಾಖಲಿಸಬೇಕು. ಇದರಿಂದ ಸಮಯದ ಉಳಿತಾಯದೊಂದಿಗೆ ನಿಖರವಾದ ಮಾಹಿತಿ ದಾಖಲಾಗುತ್ತದೆ ಎಂದು ಜಿಲ್ಲಾ ಪ್ರಧಾನ ಜನಗಣತಿ ಅಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಹೇಳಿದರು.

ಅವರು ಇಂದು (ಮಾ.31) ಸಂಜೆ, ಕಚೇರಿ ಸಭಾಂಗಣದಲ್ಲಿ ಭಾರತದ 16 ನೇ ಜನಗಣತಿ ಅಂಗವಾಗಿ ಸ್ವಯಂ ಗಣತಿ ಆರಂಭವಾಗುತ್ತಿರುವ ಕುರಿತು ಮಾಧ್ಯಮ ಪ್ರತಿನಿಧಿಗಳನ್ನು ಉದ್ದೇಶಿಸಿ, ಮಾತನಾಡಿದರು.

ಭಾರತ ಜನಗಣತಿ–2027 ರ ಅಂಗವಾಗಿ ಮೊದಲ ಹಂತದಲ್ಲಿ ಧಾರವಾಡ ಜಿಲ್ಲೆಯಲ್ಲಿ ಸ್ವಯಂ ಗಣತಿ ಕಾರ್ಯವು ಏಪ್ರೀಲ್ 1 ರಿಂದ 15 ವರೆಗೆ ಹಾಗೂ ಏಪ್ರೀಲ್ 16, 2026 ರಿಂದ ಮೇ 15, 2026 ರ ವರೆಗೆ ಮನೆಪಟ್ಟಿ ಕ್ಷೇತ್ರ ಕಾರ್ಯವನ್ನು ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

ಜನಗಣತಿ ಕಾರ್ಯಕ್ಕಾಗಿ ಧಾರವಾಡ ಜಿಲ್ಲೆಗೆ ಸಂಬಂಧಿಸಿದಂತೆ, ಜಿಲ್ಲಾಧಿಕಾರಿಗಳವರು, ಜಿಲ್ಲೆಯ ಎಲ್ಲ ಗ್ರಾಮೀಣ ಪ್ರದೇಶಕ್ಕೆ ಮತ್ತು ಜಿಲ್ಲೆಯ ಎಲ್ಲ ನಗರ ಮತ್ತು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗೆ ಪ್ರಧಾನ ಜನಗಣತಿ ಅಧಿಕಾರಿಗಳಾಗಿರುತ್ತಾರೆ. ಆಯುಕ್ತರು, ಮಹಾನಗರ ಪಾಲಿಕೆ, ಹುಬ್ಬಳ್ಳಿ–ಧಾರವಾಡ ಇವರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಮಾತ್ರ ಪ್ರಧಾನ ಜನಗಣತಿ ಅಧಿಕಾರಿಗಳಾಗಿರುತ್ತಾರೆ. ಧಾರವಾಡ ಅಪರ ಜಿಲ್ಲಾಧಿಕಾರಿಗಳು ಜಿಲ್ಲಾ ಜನಗಣತಿ ಅಧಿಕಾರಿಗಳಾಗಿರುತ್ತಾರೆ ಎಂದು ಅವರು ಹೇಳಿದರು.

ಉಪವಿಭಾಗಾಧಿಕಾರಿಗಳು, ಧಾರವಾಡ ಉಪವಿಭಾಗ, ಧಾರವಾಡ ಇವರು ಉಪವಿಭಾಗ ಮಟ್ಟದ ಚಾರ್ಜ ಅಧಿಕಾರಿಗಳಾಗಿದ್ದು, ತಾಲ್ಲೂಕಾ ಮಟ್ಟದಲ್ಲಿ (ಗ್ರಾಮೀಣ ಪ್ರದೇಶ) ತಹಶೀಲದಾರರು, ನಗರ ಪ್ರದೇಶಕ್ಕೆ ಆಯಾ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಚಾರ್ಜ ಅಧಿಕಾರಿಗಳಾಗಿರುತ್ತಾರೆ ಎಂದರು.

ತಾಲ್ಲೂಕಾ ಮಟ್ಟದಲ್ಲಿ (ಗ್ರಾಮೀಣ ಪ್ರದೇಶ)–08 ಮತ್ತು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ 05 ಹೀಗೆ ಜಿಲ್ಲೆಯಲ್ಲಿ ಒಟ್ಟು 13 ಚಾರ್ಜಗಳನ್ನು ರಚಿಸಲಾಗಿರುತ್ತದೆ. ಪ್ರಸ್ತುತ ಜನಗಣತಿಯನ್ನು ಎರಡು ಹಂತಗಳಲ್ಲಿ ನಡೆಸಲಾಗುವುದು, ಸಂಪೂರ್ಣ ಡಿಜಿಟಲ್ ಮೋಡ್‌ನಲ್ಲಿ ನಡೆಯುವ ಪ್ರಥಮ ಜನಗಣತಿಯಾಗಿದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಹೇಳಿದರು.



ಮೊದಲ ಬಾರಿಗೆ ಸ್ವಯಂ ಗಣತಿ (Self Enumeration) ವ್ಯವಸ್ಥೆಯನ್ನು ತರಲಾಗಿರುತ್ತದೆ. ಮತ್ತು ಸ್ವಯಂ ಗಣತಿ ಐಚ್ಛಿಕವಾಗಿರುತ್ತದೆ (ಔಠಿಣುಂಟಚಿಟ). ಆಸಕ್ತ ಮತ್ತು ಸ್ವಯಂ ಗಣತಿಯಲ್ಲಿ ಭಾಗವಹಿಲು ಇಚ್ಛಿಸುವ ಕುಟುಂಬಗಳು ಮಾತ್ರ Self Enumeration Access https://se.census.gov.in ಮೂಲಕ ಸ್ವಯಂ ಗಣತಿ ಮಾಡಬಹುದಾಗಿದೆ ಎಂದು ಅವರು ತಿಳಿಸಿದರು.

**ಸ್ವಯಂ ಗಣತಿ:** ಸ್ವಯಂ ಗಣತಿ ಮಾಡಲು, ಮೊದಲಿಗೆ ಅಧಿಕೃತ ಪೋರ್ಟಲ್ se.census.gov.in ಗೆ ಭೇಟಿ ನೀಡಿ, ನಂತರ ನಿಮ್ಮ ಮೊಬೈಲ್ ಸಂಖ್ಯೆಗೆ ಬರುವ ಓಟಿಪಿ ಮೂಲಕ ಲಾಗಿನ್ ಆಗಿ, ನಿಮ್ಮ ರಾಜ್ಯ, ಜಿಲ್ಲೆ ಮತ್ತು ಸ್ಥಳೀಯ ವಿವರಗಳನ್ನು ಆಯ್ಕೆ ಮಾಡಿ, ಮತ್ತು ಡಿಜಿಟಲ್ ಮ್ಯಾಪ್‌ನಲ್ಲಿ ನಿಮ್ಮ ಮನೆಯ ಸ್ಥಳವನ್ನು ಗುರುತಿಸಿ. ನಂತರ, ನಿಮ್ಮ ಮನೆ ಮತ್ತು ಕುಟುಂಬಕ್ಕೆ ಸಂಬಂಧಿಸಿದ ವಿವರಗಳನ್ನು ಭರ್ತಿ ಮಾಡಿ. ಎಲ್ಲ ಮಾಹಿತಿಯನ್ನು ಸಲ್ಲಿಸಿದ ನಂತರ, ನೀವು ಎಸ್‌ಇ ಐಡಿ (SE ID) ಅನ್ನು ಸ್ವೀಕರಿಸುತ್ತೀರಿ. ಈ ಐಡಿ ಅನ್ನು ಸುರಕ್ಷಿತವಾಗಿ ಕಾಯ್ದುಕೊಳ್ಳುವುದು ಅತ್ಯಂತ ಮುಖ್ಯವಾಗಿದೆ ಎಂದು ತಿಳಿಸಿದರು.

ಗಣತಿದಾರರು ನಿಮ್ಮ ಮನೆಗೆ ಭೇಟಿ ನೀಡಿದಾಗ, ನೀವು ನಿಮ್ಮ ಎಸ್‌ಇ ಐಡಿ ಖಇ ಖಆ ಅನ್ನು ಒದಗಿಸಿ, ಅವರು ಖಇ ಖಆ ಮೂಲಕ ನಿಮ್ಮ ಮಾಹಿತಿಯನ್ನು ದೃಢೀಕರಿಸುತ್ತಾರೆ. ಈ ರೀತಿಯಾಗಿ ಮಾಡುವುದರಿಂದ ಸಮಯವನ್ನು ಉಳಿಸುತ್ತದೆ, ನಿಖರವಾದ ಮಾಹಿತಿ, ವೇಗವಾದ ಮಾಹಿತಿಗಳ ಸಂಸ್ಕರಣೆ ಮಾಡಲು ಸಹಾಯವಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಜನಗಣತಿಗೆ ಸಂಬಂಧಿಸಿದ ಎಲ್ಲ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಎಲ್ಲ ಚಾರ್ಜ ಅಧಿಕಾರಿಗಳಿಗೆ ಮತ್ತು ಕ್ಷೇತ್ರ ತರಬೇತುದಾರರಿಗೆ ತರಬೇತಿಯನ್ನು ನೀಡಲಾಗಿದೆ. ಗಣತಿದಾರರಿಗೆ ಮತ್ತು ಮೇಲ್ವಿಚಾರಕರಿಗೆ ಆಯಾ ಚಾರ್ಜ ಹಂತಗಳಲ್ಲಿ ಏಪ್ರೀಲ್–2026 ಒಂದನೇಯ ವಾರದಲ್ಲಿ ತರಬೇತಿಯನ್ನು ನೀಡಲಾಗುವುದು ಎಂದು ತಿಳಿಸಿದರು.

ಗಣತಿ ಬ್ಲಾಕ್‌ಗಳು: ಜನಗಣತಿ ಮಾಡುವ ಸಲುವಾಗಿ ಬ್ಲಾಕ್‌ಗಳನ್ನು ರಚಿಸಲಾಗುತ್ತಿದ್ದು, ಜಿಲ್ಲೆಯಲ್ಲಿ ಗ್ರಾಮೀಣ ಭಾಗದಲ್ಲಿ 1,363 ಮತ್ತು ನಗರ ಮತ್ತು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗಳ ಪ್ರದೇಶದಲ್ಲಿ 206. ಒಟ್ಟಾರೆ (ಮಹಾನಗರ ಪಾಲಿಕೆ ಹೊರತುಪಡಿಸಿ) ಜಿಲ್ಲೆಯಲ್ಲಿ 1,569 ಬ್ಲಾಕ್‌ಗಳ ರಚನೆ ಮಾಡಲಾಗಿದೆ. ಕೊಳಚೆ ಪ್ರದೇಶಗಳಿಗೆ ಪ್ರತ್ಯೇಕ ಬ್ಲಾಕ್ ರಚಿಸಲಾಗಿದೆ. 150 ರಿಂದ 200 ಮನೆಗಳು ಅಥವಾ 700 ರಿಂದ 800 ಜನಸಂಖ್ಯೆ ಒಬ್ಬರು ಗಣತಿದಾರರನ್ನು ಮತ್ತು ಪ್ರತಿ 6–ಜನ ಗಣತಿದಾರರಿಗೆ ಒಬ್ಬರು ಮೇಲ್ವಚಾರಕರನ್ನು ನೇಮಿಸಲಾಗುವುದು. ಜಿಲ್ಲೆಯಲ್ಲಿ ಒಟ್ಟು 1,658 ಗಣತಿದಾರರನ್ನು ಮತ್ತು 287 ಮೇಲ್ವಿಚಾರಕರನ್ನು ನೇಮಿಸಲಾಗಿದೆ ಎಂದು ತಿಳಿಸಿದರು.

ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ವ್ಯಾಪ್ತಿಯ ಪ್ರದೇಶದಲ್ಲಿ 2,047 ಬ್ಲಾಕ್‌ಗಳ ರಚನೆ ಮಾಡಲಾಗಿದೆ. ಕೊಳಚೆ ಪ್ರದೇಶಗಳಿಗೆ ಪ್ರತ್ಯೇಕ ಬ್ಲಾಕ್ ರಚಿಸಲಾಗಿದೆ. ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಒಟ್ಟು 2,252 ಗಣತಿದಾರರನ್ನು ಮತ್ತು 376 ಮೇಲ್ವಿಚಾರಕರನ್ನು ನೇಮಿಸಲಾಗಿದೆ ಎಂದು ಹೇಳಿದರು.

ಸಾರ್ವಜನಿಕರು ಅವರ ಮನೆಗೆ ಭೇಟಿ ನೀಡಿದ ಗಣತಿದಾರರಿಗೆ ಸರಳ 33–ಪ್ರಶ್ನೆಗಳಿಗೆ ಮಾಹಿತಿ ನೀಡುವುದರೊಂದಿಗೆ ಭಾರತ ಜನಗಣತಿ–2027 ನೇದರಲ್ಲಿ ಪಾಲ್ಗೊಳ್ಳಬಹುದಾಗಿದೆ. ಯಾವುದೇ ದಾಖಲೆಗಳನ್ನು ಸಲ್ಲಿಸುವುದು ಅವಶ್ಯವಿರುವುದಿಲ್ಲ ಎಂದು ಅವರು ತಿಳಿಸಿದರು.

ಏಪ್ರೀಲ್ 1, 2026 ರಿಂದ ಏಪ್ರೀಲ್ 15, 2026 ರವರೆಗೆ ಸ್ವಯಂ ಗಣತಿ ಕಾರ್ಯದಲ್ಲಿ ಸಾರ್ವಜನಿಕರು ನೇರವಾಗಿ ಪಾಲ್ಗೊಳ್ಳಬಹುದಾಗಿದ್ದು, ಇದರಲ್ಲಿ ಜಿಲ್ಲೆಯ ಎಲ್ಲ ಸಾರ್ವಜನಿಕರು ಸ್ವಯಂಪ್ರೇರಿತರಾಗಿ ಪಾಲ್ಗೊಳ್ಳಲು ಮತ್ತು ನಿಮ್ಮ ಮನೆಗೆ ಭೇಟಿ ನೀಡಿದ ಗಣತಿದಾರರಿಗೆ ಮಾಹಿತಿ ನೀಡುವುದರೊಂದಿಗೆ ಜನಗಣತಿ ಕಾರ್ಯವನ್ನು ಯಶಸ್ವಿಗೊಳಿಸಲು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಮನವಿ ಮಾಡಿದರು.

ಜಿಲ್ಲೆಯ ಜನಗಣತಿ ಚಾರ್ಜ ಅಧಿಕಾರಿಗಳ ವಿವರ: ಅಳ್ನಾವರ ಹಾಗೂ ಧಾರವಾಡ ತಾಲೂಕಿಗೆ ತಹಶೀಲ್ದಾರ ಡಿ.ಹೆಚ್.ಹೂಗಾರ, ಅಣ್ಣಿಗೇರಿ ತಾಲೂಕಿಗೆ ತಹಶೀಲ್ದಾರ ಎಂ.ಜಿ.ದಾಸಪ್ಪನವರ, ಹುಬ್ಬಳ್ಳಿ ತಾಲೂಕಿಗೆ ತಹಶೀಲ್ದಾರ ಜೆ.ಬಿ.ಮಜ್ಜಗಿ, ಹುಬ್ಬಳ್ಳಿ ನಗರ ತಾಲೂಕಿಗೆ ತಹಶೀಲ್ದಾರ ಎಂ.ಬಿ.ಗಸ್ತೆ, ಕಲಘಟಗಿ ತಾಲೂಕಿಗೆ ತಹಶೀಲ್ದಾರ ಬಿ.ಕೆ.ಹೊಂಕಣದವರ, ಕುಂದಗೋಳ ತಾಲೂಕಿಗೆ ತಹಶೀಲ್ದಾರ ರಾಜು ಮಾವರಕರ, ನವಲಗುಂದ ತಾಲೂಕಿಗೆ ತಹಶೀಲ್ದಾರ ಎಸ್.ಪಿ.ಸಾವಕಾರ ಅವರನ್ನು ತಾಲೂಕು ವ್ಯಾಪ್ತಿಗೆ ಜನಗಣತಿ ಚಾಜರ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ.

ಅಣ್ಣಿಗೇರಿ ಪುರಸಭೆಯ ಮುಖ್ಯಾಧಿ ಕಾರಿ ವಾಯ್.ಜಿ.ಗದ್ದಿಗೌಡರ ಹಾಗೂ ನವಲಗುಂದ ಪುರಸಭೆಯ ಮುಖ್ಯಾ ಧಿಕಾರಿ ಎಸ್.ಪಿ.ಪೂಜಾರ ಅವರನ್ನು ಪುರಸಭೆ ವ್ಯಾಪ್ತಿಗೆ ಜನಗಣತಿ ಚಾರ್ಜ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ.

ಅಳ್ನಾವರ ಪಟ್ಟಣ ಪಂಚಾಯತಿಗೆ ತಾಲ್ಲೂಕು ಪಂಚಾಯತ ಮುಖ್ಯಾಧಿಕಾರಿ ಪ್ರಕಾಶ ಮುಗದುಮ, ಕಲಘಟಗಿ ಪಟ್ಟಣ ಪಂಚಾಯತಿಗೆ ಕಲಘಟಗಿ ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಚಂದ್ರಶೇಖರ ಬಿ. ಹಾಗೂ ಕುಂದಗೋಳ ಪಟ್ಟಣ ಪಂಚಾಯತಿಗೆ ಕುಂದಗೋಳ ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಸಿ.ವ್ಹಿ.ಕುಲಕರ್ಣಿ ಅವರನ್ನು ಜನಗಣತಿ ಚಾರ್ಜ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ ಎಂದು ಜಿಲ್ಲಾಧಿಕಾರಿ ಅವರು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಜನಗಣತಿ ಅಧಿಕಾರಿ ಆಗಿರುವ ಎಡಿಸಿ ಅವರಾದ ಗೀತಾ ಸಿ.ಡಿ. ಹಾಗೂ ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ ಹೆಗ್ಗಳಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಾನಿಪ ವಾರ್ಷಿಕ ಪ್ರಶಸ್ತಿಗೆ ಶಿವಾನಂದ ಹಿರೇಮಠ ಅವರು ಆಯ್ಕೆ

ಗದಗ: ಕರ್ನಾಟಕ ಕಾರ್ಯನಿರತ ಪತ್ರಕರ್ತ ಸಂಘದ 2024ನೇ ವಾರ್ಷಿಕ ಪ್ರಶಸ್ತಿಗಳು ಮಂಗಳವಾರ ಪ್ರಕಟವಾಗಿದ್ದು ಟಿ.ಕೆ. ಮಲಗೊಂಡು ತನಿಖಾ ವರದಿ ಪ್ರಶಸ್ತಿಗೆ ಗದಗ ಜಿಲ್ಲೆಯ ವಿಜಯವಾಣಿ ದಿನಪತ್ರಿಕೆ ಹಿರಿಯ ವರದಿಗಾರರಾದ ಶಿವಾನಂದ ಹಿರೇಮಠ ಭಾಜನರಾಗಿದ್ದಾರೆ. ಇದೇ ಏಪ್ರಿಲ್ 11 ಮತ್ತು 12 ರಂದು ಬೀದರನಲ್ಲಿ ಜರಗುವ 40 ನೇ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನದಲ್ಲಿ ಪ್ರಶಸ್ತಿ ಸ್ವೀಕರಿಸಲಿದ್ದಾರೆ. ಪ್ರಶಸ್ತಿ ಬಾಜನರಾದ ಶಿವಾನಂದ ಹಿರೇಮಠ ಅವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರಾದ ರಾಜು ಹೆಬ್ಬಳ್ಳಿ ಅವರು ಸೇರಿದಂತೆ



ಉಪಾಧ್ಯಕ್ಷರು, ಪ್ರಧಾನ ಕಾರ್ಯದರ್ಶಿ, ಜಿಲ್ಲಾ ಕಾರ್ಯಕಾರಿ ಮಂಡಳಿ ಹಾಗೂ ಸರ್ವ ಸದಸ್ಯರು ಅಭಿನಂದಿಸಿದ್ದಾರೆ.

# ವಿಶ್ವ ರಂಗಭೂಮಿ ದಿನಾಚರಣೆ



**ಬೆಳಗಾವಿ ವಾರ್ತೆ ಬಳ್ಳಾರಿ:** ನಗರದ ಸಿರುಗುಪ್ಪ ರಸ್ತೆಯ ವಿರಾಟ್ ನಗರದಲ್ಲಿ ಶ್ರೀಗುರು ಪುಟ್ಟರಾಜ ಸಂಗೀತ ಪಾಠಶಾಲೆ ಹಮ್ಮಿಕೊಂಡಿದ್ದ ವಿಶ್ವ ರಂಗಭೂಮಿ ದಿನಾಚರಣೆ ಅಂಗವಾಗಿ ಗೀತ ಗಾಯನ ಕಾರ್ಯಕ್ರಮ ನೆರವೇರಿತು

ಕಾರ್ಯಕ್ರಮದ ಉದ್ಘಾಟನೆಯನ್ನು.ಎನ್ ಬಸವರಾಜ ನೆರವೇರಿಸಿ ಕರ್ನಾಟಕ ಮಾತೆ ಮಡಿಲಲ್ಲಿ ಜನಿಸಿದ ಹಾನಗಲ್ಲ ಕುಮಾರಸ್ವಾಮಿಯವರ ನಿರ್ಧಿಷ್ಟ ಸಾಧನೆಯ ಗುರಿ ಪಂಡಿತ ಪಂಚಾಕ್ಷರಿ ಗವಾಯಿ ಡಾ. ಪಂ .ಪುಟ್ಟರಾಜ ಕವಿ ಗವಾಯಿ ಯವರಂತ ಪುತ್ರರತ್ನರನ್ನು ರಾಜ್ಯವಲ್ಲದೆ ದೇಶವಿದೇಶ ಪ್ರಪಂಚಕ್ಕೆ ನೀಡಿದ ಕೀರ್ತಿ ಕನ್ನಡನಾಡಿಗೆ ಸಲ್ಲುತ್ತದೆ ಅವರ ನಿಸ್ವಾರ್ಥ ಸೇವೆ ಇಂತಹ ಅಂಗವಿಕಲರ ಪಾಠಶಾಲೆಯಾಗಿ ನಿಮ್ಮಂತಹ ಶಿಷ್ಯವೃಂದ ಬೆಳೆಯುವದಕ್ಕೆ ಸಾಧ್ಯವಾಯಿತು ಇದು ವಿಶ್ವ ರಂಗಭೂಮಿ ದಿನಾಚರಣೆ ಸಾರ್ಥಕವಾಯಿತು ಎಂದು ನುಡಿದರು.

ಅಧ್ಯಕ್ಷತೆ ವಹಿಸಿದ್ದು, ಹೆಚ್ ತಿಪ್ಪೇಸ್ವಾಮಿ ಮಾತನಾಡಿ, ದೇಶವಿದೇಶಗಳಲ್ಲಿ ರಾಘವರು ನಾಡೋಜ ಬೆಳಗಲ್ ವೀರಣ್ಣ ನಾಡೋಜ ಮನ್ನೂರು ಸುಭದ್ರಮ್ಮನವರು ನಾಗೇಶಶಾಸ್ತ್ರೀಯವರು ಬೆಳಗಿದಬಳ್ಳಾರಿಕೀರ್ತಿ

ಈ ವತ್ತಿಗೂ ಮುಂದುವರೆದಿದೆ ಅವರ ಹಾದಿಯಲ್ಲಿ ಈ ಪಾಠಲೆಯ ಮಕ್ಕಳು ಬೆಳೆಯುವಂತಾಗಬೇಕು ಎಂದರು

ಅತಿಥಿಗಳಾಗಿ ದೊಡ್ಡ ಬಸವಗವಾಯಿ, ವಿರುಪಾಕ್ಷ ದೇವಲಾಪುರ, ಕವಿತಾ ಕಗ್ಗಲ್ ಭಾಗವಹಿಸಿದ್ದರು

ಈ ವೇಳೆ ತಿಪ್ಪೇಸ್ವಾಮಿ ಹಾಗೂ ವಿರುಪಾಕ್ಷ ದೇವಲಾಪುರ ಇವರಿಗೆ ಸನ್ಮಾನಿಸಲಾಯಿತು ಪಂಚಾಕ್ಷರಿ ನಿರೂಪಣೆ ನಡೆಸಿಕೊಟ್ಟರು.

## ಕೊಪ್ಪಳ: ಬೇಸಿಗೆ ಅವಧಿಯಲ್ಲಿ ಹತ್ತಿ ಬೆಳೆಯನ್ನು ನಾಟಿ ಮಾಡದಂತೆ ರೈತರಿಗೆ ಸಲಹೆ

ಕೊಪ್ಪಳ: ರೈತರು ಬೇಸಿಗೆ ಅವಧಿಯಲ್ಲಿ ಹತ್ತಿ ಬೆಳೆಯನ್ನು ನಾಟಿ ಮಾಡದಂತೆ ಕೊಪ್ಪಳ ಸಹಾಯಕ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಹತ್ತಿ ಬೆಳೆಯು ಕೊಪ್ಪಳ ತಾಲೂಕಿನ ಮುಂಗಾರು ಹಂಗಾಮಿನಲ್ಲಿ ಬೆಳೆಯಬಹುದಾದ ಪ್ರಮುಖ ಬೆಳೆಯಾಗಿದ್ದು, ಕೃಷಿ ವಿಶ್ವವಿದ್ಯಾಲಯದ ಶಿಫಾರಸ್ಸಿನಂತೆ ಬಿ.ಟಿ ಹತ್ತಿಯನ್ನು ಮೇ ಮಾಹೆಯಿಂದ ಜುಲೈ 15ರ ವರೆಗೆ ಬಿತ್ತಬಹುದಾಗಿದ್ದು, ಜೂನ್ 15ರೊಳಗಾಗಿ ಬಿತ್ತುವುದು ಅತೀ ಸೂಕ್ತವಾಗಿರುತ್ತದೆ. ಮಾರ್ಚ್ ಹಾಗೂ ಏಪ್ರೀಲ್ ಮಾಹೆಯಲ್ಲಿ ರೈತರು ಬಿ.ಟಿ ಹತ್ತಿ ಬಿತ್ತನೆ ಮಾಡಿದಲ್ಲಿ ಮುಂದಿನ ದಿನಗಳಲ್ಲಿ ಹತ್ತಿ ಬೆಳೆಗಳಲ್ಲಿ ರೋಗ ಕೀಟ ಬಾಧೆ ಮತ್ತು ಇತರೇ ಸಮಸ್ಯೆ ಕಂಡು ಬೆಳವಣಿಗೆ ಕುಂಠಿತವಾಗಿ ಬೆಳೆಹಾನಿಯಾಗುವ ಸಂಭವವಿರುತ್ತದೆ. ಆದ್ದರಿಂದ ರೈತರು ಬಿ.ಟಿ ಹತ್ತಿ ಬಿತ್ತನೆಗೆ ಕೃಷಿ ವಿಶ್ವವಿದ್ಯಾಲಯ ನೀಡುವ ವಲಯವಾರು ಬಿತ್ತನೆಕಾಲವನ್ನು ಅನುಸರಿಸುವಂತೆ ಹಾಗೂ ಕಾಲಾವಧಿಯ ಮುಂಚೆ ಮತ್ತು ಮುಗಿದ ನಂತರ ಬಿ.ಟಿ ಹತ್ತಿ ಬಿತ್ತನೆ ಮಾಡದಂತೆ ರೈತ ಬಾಂಧವರಿಗೆ ಪ್ರಕಟಣೆ ಮೂಲಕ ತಿಳಿಸಲಾಗಿದೆ.

# ಸಂಘರ್ಷಮಯ ವಾತಾವರಣದ ಜಗತ್ತಿಗೆ ಮಹಾವೀರರ ತತ್ವಗಳು ಸರ್ವಕಾಲಕ್ಕೂ ಪ್ರಸ್ತುತ: ಕರ್ಣಕುಮಾರ

ಕೊಪ್ಪಳ: ಸಂಘರ್ಷಮಯ ವಾತಾವರಣದ ಜಗತ್ತಿಗೆ ಮಹಾವೀರರ ತತ್ವಗಳು ಸರ್ವಕಾಲಕ್ಕೂ ಪ್ರಸ್ತುತವಾಗಿವೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ಮಂಗಳವಾರ ಕೊಪ್ಪಳ ನಗರದ ಅಶೋಕ ವೃತ್ತದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಸಹಯೋಗದಲ್ಲಿ ಭಗವಾನ್ ಮಹಾವೀರರ ಜಯಂತಿಯ ಪ್ರಯುಕ್ತ ಹಮ್ಮಿಕೊಂಡಿದ್ದ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದರು.

ಸಾಮಾಜಿಕವಾಗಿ ಕಾಡುತ್ತಿರುವ ಅನೇಕ ಸವಾಲುಗಳು ನಿವಾರಣೆಯಾಗಲು ದಾರ್ಶನಿಕರ ಚಿಂತನೆ, ಸಂದೇಶಗಳಿಂದ ಸಾಧ್ಯವಿದೆ. ಭಗವಾನ್ ಮಹಾವೀರರ ಸಂದೇಶ, ಸತ್ಯ ಮತ್ತು ಅಹಿಂಸಾ ಪಾಲನೆಯಿಂದ ಸಾಮರಸ್ಯದ ಸಮಾಜ ಕಟ್ಟುವ ಅಗತ್ಯತೆ ಹಿಂದೆಂದಿಗಿಂತಲೂ ಈಗ ಇದೆ. ಜೈನರ 24ನೇ ತೀರ್ಥಂಕರರಾಗಿದ್ದ ಮಹಾವೀರರ ತತ್ವ ಹಾಗೂ ಶಾಂತಿಯ ಪರಮೋಚ್ಚ ಸಂದೇಶಗಳು ಇಂದಿನ ವಿಶ್ವಕ್ಕೆ ದಾರಿದೀಪವಾಗಿವೆ ಎಂದರು.

ಈ ಸಂದರ್ಭದಲ್ಲಿ ಜೈನ ಸಮಾಜದ ಅಧ್ಯಕ್ಷರಾದ ಮಹೀಂದ್ರ ಚೋಪ್ರಾ ಹಾಗೂ ಸಮಾಜ ಬಾಂಧವರು ಉಪಸ್ಥಿತರಿದ್ದರು.

**ಅರ್ಥಪೂರ್ಣ ಮೆರವಣಿಗೆ:** ಭಗವಾನ್ ಮಹಾವೀರ ಜಯಂತಿ ಅಂಗವಾಗಿ ಮಹಾವೀರರ ಭಾವಚಿತ್ರದ ಮೆರವಣಿಗೆ ನಗರದ ಅಶೋಕ ವೃತ್ತದಿಂದ ಪ್ರಾರಂಭಗೊಂಡು ಜವಾಹರ ರಸ್ತೆ, ಗಡಿಯಾರ ಕಂಬದ ಮಾರ್ಗವಾಗಿ ಕೋಟೆ ರಸ್ತೆಯ ಜೈನ್ ಬಸದಿವರೆಗೆ ಸಾಗಿ, ಅಲ್ಲಿ ಪೂಜಾ ಕಾರ್ಯಕ್ರಮ ಜರುಗಿತು.

ನಂತರ ಅಲ್ಲಿಂದ ಪುನಃ ಗಡಿಯಾರ ಕಂಬದ ಮಾರ್ಗವಾಗಿ ಗೋಶಾಲೆ ರಸ್ತೆಯ ಜೈನ್ ಮಂದಿರದ ವರೆಗೆ ಶಾಂತಿ ಸಂದೇಶಗಳ ಘೋಷಣೆಯೊಂದಿಗೆ ಸಾಗುವ ಮೂಲಕ ಅರ್ಥಪೂರ್ಣವಾಗಿ ಜರುಗಿತು. ಮೆರವಣಿಗೆಯಲ್ಲಿ ಸಮಾಜದ ಮುಖಂಡರು, ಮಹಿಳೆಯರು, ಮಕ್ಕಳು ಭಾಗವಹಿಸಿದ್ದರು.



# ನಾಲ್ಕು ಕಾರ್ಮಿಕ ಸಂಹಿತೆಗಳ ವಿರುದ್ಧ 'ಕರಾಳ ದಿನ' ಆಚರಣೆ




**ಬೆಳಗಾವಿ ವಾರ್ತೆ ಬಳ್ಳಾರಿ:** ಕೇಂದ್ರ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ (ಜೆಸಿಟಿ ಯು) ಮತ್ತು ಸ್ವತಂತ್ರ ವಲಯ ಒಕ್ಕೂಟಗಳು ಹಾಗೂ ಅಸೋಸಿಯೇಷನ್ಗಳು ಏಪ್ರಿಲ್ 1 ರಂದು 'ಕರಾಳ ದಿನ' ವನ್ನಾಗಿ ಆಚರಿಸಲು ಕಾರ್ಮಿಕ ಸಂಘಟನೆಗಳಿಗೆ ಕರೆ ನೀಡಿವೆ. ಈ ನಾಲ್ಕು ಕಾರ್ಮಿಕ ಸಂಹಿತೆಗಳ ಅನುಷ್ಠಾನಕ್ಕಾಗಿ ಕೇಂದ್ರ ನಿಯಮಗಳ ಅಧಿಸೂಚನೆಯನ್ನು ಹೊರಡಿಸುವುದಾಗಿ ಕೇಂದ್ರ ಸರ್ಕಾರವು ಈ ಹಿಂದೆ ಘೋಷಿಸಿದ ದಿನ ಇದಾಗಿದೆ. ಈ ಹಿನ್ನಲೆಯಲ್ಲಿ ಜೆಸಿಟಿಯುನಿಂದ ಬಳ್ಳಾರಿಯು ಜಿಲ್ಲಾಧಿಕಾರಿ ಕಛೇರಿಯ ಬಳಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ವಿವಿಧ ಕೇಂದ್ರ ಕಾರ್ಮಿಕ ಸಂಘಟನೆಗಳ ಮುಖಂಡರು ಮಾತನಾಡಿ, "ವ್ಯವಹಾರದ ಸುಗಮಗೊಳಿಸುವಿಕೆ" (Ease of Doing Business) ಹೆಸರಿನಲ್ಲಿ ತರಲಾದ ಈ ಕಾರ್ಮಿಕ ವಿರೋಧಿ ಮತ್ತು ಉದ್ಯೋಗದಾತ ಪರವಾದ ಕಾರ್ಮಿಕ ಸಂಹಿತೆಗಳನ್ನು ಕೈಬಿಡಬೇಕೆಂದು ಕಾರ್ಮಿಕ ಸಂಘಟನೆಗಳು ನಿರಂತರವಾಗಿ ವಿರೋಧಿಸುತ್ತಿವೆ ಮತ್ತು ಒತ್ತಾಯಿಸುತ್ತಿವೆ. ಐತಿಹಾಸಿಕ ಫೆಬ್ರವರಿ 12 ರ ಸಾರ್ವತ್ರಿಕ ಮುಷ್ಕರದ ನಂತರವೂ, ಈ ಕಾರ್ಮಿಕ ಸಂಹಿತೆಗಳನ್ನು ಹಿಂತೆಗೆದುಕೊಳ್ಳಲು ಅಥವಾ ಈ ವಿಷಯದ ಕುರಿತು ಕೇಂದ್ರ ಕಾರ್ಮಿಕ ಸಂಘಟನೆಗಳೊಂದಿಗೆ ಅರ್ಥಪೂರ್ಣ ಸಭೆ ನಡೆಸಲು ಕೇಂದ್ರ ಸರ್ಕಾರವು ಹಿಂಜರಿಯುತ್ತಿದೆ. ಅಲ್ಲದೆ, ಕರಡು ಹಂತದಿಂದಲೂ ಕಾರ್ಮಿಕ ಸಂಘಟನೆಗಳೊಂದಿಗೆ ಯಾ ವುದೇ ಸಮಾಲೋಚನೆ ನಡೆಸಲಾಗಿಲ್ಲ; ದೇಶದ ಕಾರ್ಮಿಕರ ಜೀವನದ ಮೇಲೆ ಇಷ್ಟೊಂದು ಗಂಭೀರ ಪರಿಣಾಮ ಬೀರುವ ವಿಷಯದ ಬಗ್ಗೆ ಚರ್ಚಿಸಲು ಯಾವುದೇ 'ಭಾರತೀಯ ಕಾರ್ಮಿಕ ಸಮ್ಮೇಳನ'ವನ್ನು (ILC) ಕರೆದಿಲ್ಲ. ಇದು ಭಾರತವು ಸಹಿ ಹಾಕಿರುವ ಮತ್ತು ಬದ್ಧವಾಗಿರುವ ಅಂತರಾಷ್ಟ್ರೀಯ ಕಾರ್ಮಿಕ ಮಾನದಂಡಗಳ ಉಲ್ಲಂಘನೆಯಾಗಿದೆ. ಈ ಕಾರ್ಮಿಕ ಸಂಹಿತೆಗಳು ನಮ್ಮ ದೇಶದ ಸಂಪತ್ತು ಸೃಷ್ಟಿಕರ್ತರಾದ ಕಾರ್ಮಿಕ ವರ್ಗವನ್ನು ಮತ್ತೊಮ್ಮೆ ಬ್ರಿಟಿಷ್ ವಸಾಹತುಶಾಹಿ ಕಾಲದ ಶೋಷಣೆಯ ಪರಿಸ್ಥಿತಿಗೆ ತಳ್ಳಲಿವೆ ಎಂದರು.

ಎಐಯುಟಿಯುಸಿ ಜಿಲ್ಲಾ ಅಧ್ಯಕ್ಷರು ಎ. ದೇವದಾಸ್, ಸಿಐಟಿಯು ರಾಜ್ಯ ಉಪಾಧ್ಯಕ್ಷರು ಸತ್ಯಬಾಬು, ಬ್ಯಾಂಕ್ ನೌಕರರ ಯುನಿಯನ್ (ಬೆಫಿ)ಯ ಘನ ಮಲ್ಲಿಕಾರ್ಜುನ, ಮುಖಂಡರಾದ ಸೋಮಶೇಖರ ಗೌಡ, ಡಾ. ಪ್ರಮೋದ್, ಎ. ಶಾಂತಾ, ಚಂದ್ರಕುಮಾರಿ, ಶರ್ಮಾಸ್, ಮಲ್ಲಮ್ಮ, ಚೇತನ್, ಮುರಳಿಕೃಷ್ಣ, ರಂಗಣ್ಣ. ಎನ್.ಎಂ. ಡಿ. ಸಿ , ಹಾಸ್ಟೆಲ್, ವಿಮ್ಸ್ ಇನ್ನಿತರ ಗುತ್ತಿಗೆ ಕಾರ್ಮಿಕರು ಭಾಗವಹಿಸಿದ್ದರು.

# ಕೆಎಲ್ಎ ಕಾಲೇಜಿನಲ್ಲಿ ಕಸಾಪದಿಂದ ದತ್ತಿ ಉಪನ್ಯಾಸ

## ಜನರ ಸಹಕಾರದಿಂದ ಮಾತ್ರ ಸಾಹಿತ್ಯ ಸಂರಕ್ಷಣೆ: ಪರಣ್ಣ ಮುನವಳ್ಳಿ



**ಬೆಳಗಾವಿ ವಾರ್ತೆ ಗಂಗಾವತಿ:** ಕನ್ನಡ ಮತ್ತು ಅದರ ಸಾಹಿತ್ಯ ಉಳಿಯಬೇಕು ಎಂದರೆ ಕೇವಲ ಪರಿಷತ್, ಸರಕಾರ ಪ್ರಯತ್ನ ಮಾಡಿದರೆ ಸಾಲದು, ಬದಲಿಗೆ ಜನರ ಸಹಕಾರದಿಂದ ಮಾತ್ರ ಕನ್ನಡ ಉಳಿಯಲು ಸಾಹಿತ್ಯ ಸಂರಕ್ಷಣೆ ಸಾಧ್ಯ ಎಂದು ಮಾಜಿಶಾಸಕ ಪರಣ್ಣ ಮುನವಳ್ಳಿ ಹೇಳಿದರು.

ತಾಲ್ಲೂಕಿನ ವಡ್ಡರಹಟ್ಟಿಯಲ್ಲಿರುವ ಕರ್ನಾಟಕ ಲಿಂಗಾಯತ ಶಿಕ್ಷಣ ಸಂಸ್ಥೆಯ (ಕೆಎಲ್ಎ) ಕಾಲೇಜಿನಲ್ಲಿ ಮಂಗಳವಾರ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಹಮ್ಮಿಕೊಳ್ಳಲಾಗಿದ್ದ ದತ್ತಿ ಉಪನ್ಯಾಸ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಕನ್ನಡ ಸಾಹಿತ್ಯ ಪರಿಷತ್ತಿಗೆ ಸಾರ್ವಜನಿಕರು ಸಹಕಾರ ನೀಡಿದರೆ ಕನ್ನಡ ಭಾಷೆ ಮತ್ತು ಸಾಹಿತ್ಯ ಬೆಳೆಯಲು ಸಾಧ್ಯವಾಗುತ್ತದೆ. ಕಸಾಪವು ಶಾಲಾ–ಕಾಲೇಜುಗಳಲ್ಲಿ ಇಂತಹ ಕಾರ್ಯಕ್ರಮ ಆಯೋಜಿಸುವ ಮೂಲಕ ವಿದ್ಯಾರ್ಥಿಗಳಲ್ಲಿ ಕನ್ನಡ ಬಗ್ಗೆ ಅಭಿಮಾನ ಮೂಡಿಸುವ ಕೆಲಸ ಮಾಡುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕೆಎಲ್ಎ ಕಾಲೇಜಿನ ಸ್ಥಾನಿಕ ಆಡಳಿತ ಮಂಡಳಿ ಅಧ್ಯಕ್ಷ ಹೊಸ್ಕೇರಿ ಗಿರಿಯಪ್ಪ ಮಾತನಾಡಿ, ಕನ್ನಡ ಉಳಿದರೆ ಮಾತ್ರ ನಮ್ಮ ಅಸ್ಮಿತೆ ಇರಲಿದೆ. ಈ ನಿಟ್ಟಿನಲ್ಲಿ ನಾವು ಪ್ರತಿ ಸಾಹಿತ್ಯದ ಚಟುವಟಿಕೆಗೆ ಪ್ರೋತ್ಸಾಹ ನೀಡುತ್ತಲೆ ಬಂದಿದ್ದೇವೆ. ಇತರೆ ಶಿಕ್ಷಣ ಸಂಸ್ಥೆಗಳು ಮುಂದೆ ಬಂದು ಕನ್ನಡ ಕಾರ್ಯಕ್ರಮಕ್ಕೆ ಕೈ ಜೋಡಿಸಬೇಕು ಎಂದು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಕಸಾಪದ ಜಿಲ್ಲಾ ಅಧ್ಯಕ್ಷ ಶರಣೇಗೌಡ ಪೊಲೀಸ್ ಪಾಟೀಲ್ ಮಾತನಾಡಿ, ವರ್ಷದುದ್ದಕ್ಕೂ ಕನ್ನಡದ ಕಾರ್ಯಕ್ರಮ ಆಯೋಜಿಸುವ ಮೂಲಕ ಜನರಲ್ಲಿ ಕನ್ನಡದ ಪ್ರಜ್ಞೆ ಸಾದಾ ಜಾಗೃತವಾಗಿಡಬೇಕು ಎಂಬುವುದು ಕಸಾಪದ ಆಶಯ, ಆದರೆ ದತ್ತಿ ನಿಧಿ ಸ್ಥಾಪಿಸಲು ಜನ ಮುಂದೆ ಬರುತ್ತಿಲ್ಲ. ಬಹುಶಃ ದತ್ತಿನಿಧಿಗೆ ಠೇವಣಿ ಇಡಬೇಕಿರುವ ಹಣದ ಮೊತ್ತ ಹೆಚ್ಚಾಗಿದೆಯೋ ಅಥವಾ ಜನರಲ್ಲಿ ಆಸಕ್ತಿ ಇಲ್ಲವೋ ಗೊತ್ತಿಲ್ಲ. ಆದರೆ ಕಸಾಪ ಈ ಬಗ್ಗೆ ಗಂಭಿರ ಚಿಂತನೆ ನಡೆಸಿದ್ದು ಪರ್ಯಾಯ ವ್ಯವ್ಯಸ್ಥೆ ಮಾಡಲಾಗುವುದು ಎಂದರು.

ಕಾರ್ಯಕ್ರಮ ಉದ್ದೇಶಿಸಿ ಕಸಾಪದ ತಾಲ್ಲೂಕು ಅಧ್ಯಕ್ಷ ರುದ್ರೇಶ ಆರ್ಹಾಳ, ಸನ್ಮಾನಿತರಾದ ಸೋಮನಾಥ ಪಟ್ಟಣಶೆಟ್ಟಿ, ಎಸ್.ಎಂ. ಪಟೇಲ್ ಮಾತನಾಡಿದರು.

ಕೆಎಲ್ಎ ಕಾಲೇಜಿನ ಪ್ರಾಂಶುಪಾಲೆ ಡಾ. ಮಾನಸ ಡಿ.ಎ. ಕಸಾಪದ ಜಿಲ್ಲಾ ಕೋಶಾಧಿಕಾರಿ ರಮೇಶ ಕುಲಕಣರ್ಣಿಟಿಜಜಜಿುಟಿಜಜ ವೇದಿಕೆಯಲ್ಲಿದ್ದರು.

ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ವಕೀಲ ಸೋಮನಾಥ ಪಟ್ಟಣಶೆಟ್ಟಿ, ಪತ್ರಕರ್ತರಾದ ಎಸ್.ಎಂ. ಪಟೇಲ್, ವೈ. ನಾಗರಾಜ್, ಸುರೇಶ ಸಂಕನೂರು ಅವರನ್ನು ಸನ್ಮಾನಿಸಲಾಯಿತು.

ದತ್ತಿದಾನಿಗಳಾದ ಮಹಾಂತೇಶ ಕೋಟೆ, ಪಾಂಡುರಂಗ ದರೋಜಿ ಭಾಗವಹಿಸಿದ್ದರು.

'ವಚನ ಸಾಹಿತ್ಯದಲ್ಲಿ ಸ್ತ್ರಿ ಸಂವೇದನೆ' ಎಂಬ ವಿಷಯದ ಕುರಿತು ಸಾಹಿತಿ ಅರಳಿ ನಾಗಭೂಷಣ, 'ಶೋಷಣೆ ರಹಿತ ಸಮಾಜ ನಿರ್ಮಾಣದಲ್ಲಿ ಬಸವಣ್ಣನ ಪಾತ್ರ' ಎಂಬ ವಿಷಯದ ಬಗ್ಗೆ ಹಿರಿಯ ಉಪನ್ಯಾಸಕ ಎ.ಕೆ. ಮಹೇಶ ಕುಮಾರ ಹಾಗೂ 'ಜಾನಪದ ಸಾಹಿತ್ಯ'ದ ಬಗ್ಗೆ ಜಾನಪದ ಹಾಡುಗಾರ ಸುಖಮುನಿ ಉಪ್ಯನಾಸ ನೀಡಿದರು.

ರಾಜಶೇಖರಪ್ಪ ಹೊಸಕೇರಿ, ಚನ್ನಬಸಮ್ಮ ಈಶ್ವರಪ್ಪ ಮುನವಳ್ಳಿ, ಬಸವರಾಜ ಕೋಟೆ, ಡಿ.ಗೋವರ್ಧನ ರಾಮಚಂದ್ರಪ್ಪ ದರೋಜಿ ಸ್ಮರಣಾರ್ಥ ಹಮ್ಮಿಕೊಳ್ಳಲಾಗಿದ್ದ ದತ್ತಿ ಉಪನ್ಯಾಸಕ್ಕೆ ಮಹನೀಯರ ಭಾವಚಿತ್ರಕ್ಕೆ ಗೌರವ ನಮನ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

# ಗ್ರಾಮಗಳಲ್ಲಿ ಅಕ್ರಮ ಮದ್ಯ ಮಾರಾಟ : ಇಸ್ಪೀಟ್ ದಂಧೆ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹ

**ಬೆಳಗಾವಿ ವಾರ್ತೆ ಗಂಗಾವತಿ:** ತಾಲೂಕಿನ ನಾಗನಹಳ್ಳಿ ಗ್ರಾಮದಲ್ಲಿ ನಡೆಯುತ್ತಿರುವ ಅಕ್ರಮ ಮದ್ಯ ಮಾರಾಟ ಮತ್ತು ಇಸ್ಪೀಟ್ (ಜೂಜಾಟ) ದಂಧೆಗೆ ತಕ್ಷಣವೇ ಕಡಿವಾಣ ಹಾಕಿ, ಸಂಬಂಧಪಟ್ಟವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಗ್ರಾಮಸ್ಥರು ಗಂಗಾವತಿ ನಗರ ಠಾಣೆಯ ಡಿ ವೈಎಸ್ಪಿ ಜೆ.ಎಸ್ ನ್ಯಾಮಗೌಡರ್ ಅವರಿಗೆ ಮನವಿ ಸಲ್ಲಿಸುವುದರ ಮೂಲಕ ಆಗ್ರಹಿಸಿದರು.

ಈ ವೇಳೆ ಡಾ.ರಾಜಕುಮಾರ್ ಅಭಿಮಾನಿ ಸಂಘಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಖಾದರ್ ಭಾಷಾ, ಮತ್ತು ಗ್ರಾಮದ ಮುಖಂಡರು, ಹಿರಿಯರು ಹಾಗೂ ಮಹಿಳೆಯರು ಒಗ್ಗೂಡಿ, ಸಂಬಂಧಿತ ಅಧಿಕಾರಿ ಜೆ.ಎಸ್. ನ್ಯಾಮಗೌಡರ್ ಅವರಿಗೆ ಮನವಿ ಸಲ್ಲಿಸಿ, ಗ್ರಾಮದಲ್ಲಿ ಅಕ್ರಮ ಚಟುವಟಿಕೆಗಳು ಹೆಚ್ಚುತ್ತಿರುವುದರಿಂದ ಸಾರ್ವಜನಿಕರ ಜೀವನದಲ್ಲಿ ಶಾಂತಿ–ಸುವ್ಯವಸ್ಥೆಗೆ ಧಕ್ಕೆಯಾಗುತ್ತಿದೆ ಎಂದು ಆರೋಪಿಸಿದರು.

ಅಕ್ರಮ ಮದ್ಯ ಮಾರಾಟದಿಂದ ಯುವಕರ ಜೀವನ ಹಾಳಾಗುತ್ತಿದ್ದು, ಇಸ್ಪೀಟ್ ದಂಧೆಯಿಂದ ಕುಟುಂಬಗಳಲ್ಲಿ ಆರ್ಥಿಕ ಸಂಕಷ್ಟಗಳು ಹೆಚ್ಚುತ್ತಿವೆ. ಅಲ್ಲದೆ, ಈ ಚಟುವಟಿಕೆಗಳಿಂದ ಗ್ರಾಮದಲ್ಲಿ ಅಪರಾಧ ಚಟುವಟಿಕೆಗಳು ಹೆಚ್ಚಾಗುವ ಸಾಧ್ಯತೆ ಇದೆ ಎಂಬ ಆತಂಕವನ್ನೂ ವ್ಯಕ್ತಪಡಿಸಿದರು. ಕಾನೂನು ಉಲ್ಲಂಘನೆಗೆ ಕಾರಣರಾಗಿ ರುವವರ ವಿರುದ್ಧ ಕಠಿಣವಾಗಿ ಪ್ರಕರಣ ದಾಖಲಿಸಿ, ನಿಯಮಾನುಸಾರ ಕ್ರಮ ಕೈಗೊ ಳ್ಳಬೇಕೆಂದು ಗ್ರಾಮಸ್ಥರು ಒತ್ತಾಯಿಸಿದರು.

ಅಕ್ರಮ ಮದ್ಯ ಮಾರಾಟವು ಕರ್ನಾಟಕ ಅಬಕಾರಿ ಕಾಯ್ದೆಯಡಿ ಶಿಕ್ಷಾರ್ಹವಾಗಿದ್ದು, ಇಸ್ಪೀಟ್ ದಂಧೆ ಸಾರ್ವಜನಿಕ ಜೂಜಾಟ ನಿಷೇಧ ಕಾಯ್ದೆಗಳಡಿ ಅಪರಾಧವಾಗಿದೆ ಎಂದು ಅವರು ಗಮನಕ್ಕೆ ತಂದರು.

ಇಂತಹ ಅಕ್ರಮ ಚಟುವಟಿಕೆಗಳನ್ನು ತಡೆಯಲು ನಿಯಮಿತ ದಾಳಿ ನಡೆಸಿ, ಆರೋಪಿಗಳನ್ನು ಬಂಧಿಸುವ ಮೂಲಕ ಗ್ರಾಮದಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಪಾಡುವಂತೆ ಗ್ರಾಮಸ್ಥರು ಮನವಿಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಗ್ರಾಮಸ್ಥರೊಂದಿಗೆ ಮಹಿಳೆಯರು ಸಹ ದೊಡ್ಡ ಸಂಖ್ಯೆಯಲ್ಲಿ ಭಾಗವಹಿಸಿ, "ಗ್ರಾಮದ ಶಾಂತಿ ಹಾಗೂ ಯುವಜನರ ಭವಿಷ್ಯವನ್ನು ಕಾಪಾಡಲು ತಕ್ಷಣ ಕ್ರಮ ಅಗತ್ಯ ಎಂದು ಒತ್ತಾಯಿಸಿದರು.



# ಕ್ಷೇತ್ರದಲ್ಲಿ ಶಿಕ್ಷಣಕ್ಕೆ ಪ್ರಥಮ ಆದ್ಯತೆ : ರಾಯರಡ್ಡಿ



**ಬೆಳಗಾವಿ ವಾರ್ತೆ ಕುಕನೂರು :** ಯಲಬುರ್ಗಾ ತಾಲ್ಲೂಕು ಶಿಕ್ಷಣದಲ್ಲಿ ಅತಿ ಹಿಂದುಳಿದ ಪ್ರದೇಶವಾಗಿದ್ದ ಸಂದರ್ಭದಲ್ಲಿ ತಾಲ್ಲೂಕಿನಾದ್ಯಂತ ಬೆರಳೆಣಿಕೆಯಷ್ಟು ಶಾಲಾ ಕಾಲೇಜುಗಳಿದ್ದು, ಶಿಕ್ಷಣಕ್ಕಾಗಿ ವಿದ್ಯಾರ್ಥಿಗಳು ಪರದಾಡುವಂತಾಗಿತ್ತು, ಆದರೆ ಇಂದು ನಮ್ಮ ಕ್ಷೇತ್ರದಲ್ಲಿ ಹೆಜ್ಜೆಗೊಂದರಂತೆ ಶಾಲೆ, ಕಾಲೇಜು ಮಂಜೂರು ಮಾಡಿಸಿ ಕ್ಷೇತ್ರದಲ್ಲಿ ಶಿಕ್ಷಣಕ್ಕೆ ಮೊದಲ ಆದ್ಯತೆ ನೀಡಿದ್ದೇನೆ ಎಂದು ಶಾಸಕ ಬಸವರಾಜ ರಾಯರಡ್ಡಿ ಹೇಳಿದರು.

ಅವರು ಶಿರೂರು ಗ್ರಾಮದ ಪ್ರೌಢಶಾಲೆಯನ್ನು ಉನ್ನತಿಕರಿಸಿ ಕಾಲೇಜು ಮಂಜೂರು ಮಾಡಿಸಿದ್ದಕ್ಕಾಗಿ ಗ್ರಾಮಸ್ಥರು ಶಾಸಕ ಬಸವರಾಜ ರಾಯರಡ್ಡಿಯವರಿಗೆ ಹಮ್ಮಿಕೊಂಡ ಸನ್ಮಾನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಇಂದು ನಮ್ಮ ಕ್ಷೇತ್ರದಲ್ಲಿ ಸಾಕಷ್ಟು ಮೊರಾರ್ಜಿ ವಸತಿ ಶಾಲೆ, ನವೋದಯ, ಸರಕಾರಿ ಪ್ರೌಢಶಾಲೆ, ಕಾಲೇಜು, ಇಂಜನೀಯರಿಂಗ್ ಕಾಲೇಜು ಹೀಗೆ ಹತ್ತು ಹಲವಾರು ರೀತಿಯಲ್ಲಿ ನಮ್ಮ ಕ್ಷೇತ್ರದಲ್ಲಿ ಶಿಕ್ಷಣಕ್ಕೆ ಮಹತ್ವ ನೀಡಲಾಗಿದ್ದು, ಪ್ರತಿಯೊಬ್ಬರೂ ಇದರ ಸದುಪಯೋಗ ಪಡೆದುಕೊಂಡು ಶೈಕ್ಷಣಿಕವಾಗಿ ಮುಂದೆ ಬರಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಈಶಪ್ಪ ದೊಡ್ಡಮನಿ ಅಧ್ಯಕ್ಷರು ಬ್ಲಾಕ್ ಕಾಂಗ್ರೆಸ್ ಪರಿಶಿಷ್ಟ ಜಾತಿ ಕುಕನೂರು, ಯಂಕಣ್ಣ ಯರಾಶಿ, ಹನುಮಂತಗೌಡ ಚಂಡೂರ್, ಪರ್ವತಗೌಡ್ರು, ಸೋಮನಗೌಡ್ರು, ಶಂಕರ್ ಗೌಡ್ರ ಹಾಳಕೇರಿ, ಸುಭಾಸ್ ರೆಡ್ಡಿ ಮಾದಿನೂರು, ವಿರುಪಾಕ್ಷಪ್ಪ ಹಿರೇಗೌಡ್ರು, ಹನುಮಂತ ಅಕ್ಕಸಾಲಿಗ, ರಮೇಶ್ ವಾಲ್ಮೀಕಿ, ವೀರೇಶ್ ಹುಬ್ಬಳ್ಳಿ, ಈರಪ್ಪ ಕಡೆಗತ್ತಿ, ಶ್ರೀಧರ್ ಪಂಚಾಳ,ಈರಪ್ಪ ನಡುವಿನಮನಿ, ಈರಪ್ಪ ದೊಡ್ಮನಿ, ವೀರನಗೌಡರ್ ಸೋಮನಗೌಡ್ರು, ಈರಪ್ಪ ಜನತಾಮನಿ, ಮಂಜಪ್ಪ ಕಡೇಮನಿ ಸೇರಿದಂತೆ ಇತರರು ಇದ್ದರು.

# ಅಕ್ರಮ ಗಣಿಗಾರಿಕೆ ದಂಧೆ ತಡೆಯುವಂತೆ ಡಿಸಿಗೆ ಮನವಿ



**ಬೆಳಗಾವಿ ವಾರ್ತೆ ಬೆಳಗಾವಿ:** ಖಾನಾಪುರ, ಬೆಳಗಾವಿ ಭಾಗದಲ್ಲಿ ಅಕ್ರಮ ಗಣಿಗಾರಿಕೆ ತಡೆಯುವಂತೆ ಆಗ್ರಹಿಸಿ ಮಂಗಳವಾರ ರಾಜಕುಮಾರ ಟೋಪಣ್ಣವರ ಹಾಗೂ ಸುಜೀತ್ ಮುಳಗುಂದ್ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಬಾಕ್ಸೈಟ್, ಲೇಟರೈಟ್ ಮತ್ತು ಸಿಲಿಕಾ ಖನಿಜಗಳನ್ನು ವ್ಯಾಪಕವಾಗಿ ಅಕ್ರಮವಾಗಿ ತೆಗೆಯಲಾಗುತ್ತಿದೆ. ಬೆಳಗುಂಡಿ, ಬಕನೂರು, ಬೀಜಗರ್ಣಿ, ಗೋಳ್ಯಾಳಿ, ಅವುಟೆ, ಬೆಟಗೇರಿ, ಕಿಣಯೆ, ಇನಾಮ ಬಡಸ್ ಹಾಗೂ ಖಾನಾಪುರ ತಾಲೂಕಿನ ತೋರಳಿ ಗ್ರಾಮಗಳಲ್ಲಿ ಈ ಅಕ್ರಮ ಚಟುವಟಿಕೆಗಳು ನಡೆಯುತ್ತಿವೆ. ಅಲ್ಲದೇ ರೈತರ ಅನುಮತಿ ಇಲ್ಲದೆ ಅವರ ಕೃಷಿಭೂಮಿಗಳಲ್ಲೇ ಗಣಿಗಾರಿಕೆ ನಡೆಸಲಾಗುತ್ತಿದ್ದು, ಇದರಿಂದ ಭೂಮಿ ಹಾನಿಗೊಳಗಾಗುತ್ತಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಮಹಾರಾಷ್ಟ್ರದ ಸಮೀಪದ ಪ್ರದೇಶಗಳಿಗೆ ನೀಡಲಾದ ಗಣಿಗಾರಿಕೆ ಪಾಸ್‌ಗಳನ್ನು ದುರುಪಯೋಗಪಡಿಸಿ ಕೊಂಡು ಕರ್ನಾಟಕದ ಈ ಭಾಗಗಳಲ್ಲಿ ಖನಿಜಗಳನ್ನು ತೆಗೆಯಲಾಗುತ್ತಿದೆ. ಖನಿಜಗಳನ್ನು ಡಾಲ್ಮಿಯಾ ಸಿಮೆಂಟ್ ಹಾಗೂ ಚೆಟ್ಟಿನಾಡ್ ಸಿಮೆಂಟ್ ಕಂಪನಿ ಗಳಿಗೆ ಸಾಗಿಸಲಾಗುತ್ತಿದೆ ಎಂಬ ಶಂಕೆ ಇದೆ. ಅಕ್ರಮ ಗಣಿಗಾರಿಕೆ ಹೆಚ್ಚಾಗಿ ರಾತ್ರಿ 2 ಗಂಟೆಯಿಂದ ಬೆಳಿಗ್ಗೆ 6 ಗಂಟೆ ಯವರೆಗೆ ನಡೆಯುತ್ತಿದ್ದು, ಅಧಿಕಾರಿಗಳ ಗಮನ ತಪ್ಪಿಸಲು ಈ ರೀತಿಯ ಕಾರ್ಯಾ ಚರಣೆ ನಡೆಯುತ್ತಿದೆ. ಭಾರೀ ಲಾರಿಗಳ ಸಂಚಾರ ಬೆಳಗಾವಿ ಹಾಗೂ ಖಾನಾಪುರ ಭಾಗದ ಪಶ್ಚಿಮ ರಸ್ತೆಗಳ ಮೇಲೆ ಹೆಚ್ಚಿರುವುದು ಸ್ಥಳೀಯರ ಆತಂಕಕ್ಕೆ ಕಾರಣವಾಗಿದೆ ಎಂದು ರಾಜಕುಮಾರ್ ಟೋಪಣ್ಣವರ ಆರೋಪಿಸಿದರು.

ಈ ಭಾಗಗಳು ಪರಿಸರದ ದೃಷ್ಟಿಯಿಂದ ಸೂಕ್ಷ್ಮ ಪ್ರದೇಶಗಳಾಗಿದ್ದು, ಅಕ್ರಮ ಗಣಿಗಾರಿಕೆಯಿಂದ ಅರಣ್ಯ ನಾಶ, ಭೂಗರ್ಭ ಜಲಮಟ್ಟ ಕುಸಿತ, ಮಣ್ಣು ಕೊಚ್ಚಿಹೋಗುವಿಕೆ ಸೇರಿದಂತೆ ಗಂಭೀರ ಪರಿಸರ ಹಾನಿ ಉಂಟಾಗುತ್ತಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದ ದೂರಿನಲ್ಲಿ ತಕ್ಷಣ ತನಿಖೆ ನಡೆಸಿ ಅಕ್ರಮ ಗಣಿಗಾರಿಕೆಯನ್ನು ನಿಲ್ಲಿಸುವಂತೆ ಹಾಗೂ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಸಾಮಾಜಿಕ ಕಾರ್ಯಕರ್ತ ಸುಜೀತ್ ಮುಳಗುಂದ ಒತ್ತಾಯಿಸಿದ್ದಾರೆ.

## ರೋಗಿಗಳು ಗರ್ಭಿಣಿ ಬಾಣಂತಿಯರೊಂದಿಗೆ ಸಂವಾದ

# ಸರ್ಕಾರಿ ಆಸ್ಪತ್ರೆಗೆ ಮಹಿಳಾ ಆಯೋಗ ಅಧ್ಯಕ್ಷ ಡಾ.ನಾಗಲಕ್ಷ್ಮಿ ಚೌಧರಿ ಭೇಟಿ



**ಬೆಳಗಾವಿ ವಾರ್ತೆ ಅಥಣಿ:** ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿ ಚೌಧರಿ ಅವರು ಅಥಣಿ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿ, ಪರಿಶೀಲಿಸಿದರು. ಈ ವೇಳೆ ರೋಗಿಗಳು, ಗರ್ಭಿಣಿಯರು ಹಾಗೂ ಬಾಣಂತಿಯರೊಂದಿಗೆ ಸಂವಾದ ನಡೆಸಿ ಆಸ್ಪತ್ರೆಯ ಕಾರ್ಯ ವೈಖರಿಯ ಬಗ್ಗೆ ಮಾಹಿತಿ ಪಡೆದರು.

ನಂತರ ಮಾಧ್ಯಮದವರೊಂದಿಗೆ ಮಾತನಾಡಿ ಅಥಣಿ ಸರ್ಕಾರಿ ಆಸ್ಪತ್ರೆಯು ಅತ್ಯಂತ ಸ್ವಚ್ಛವಾಗಿದ್ದು, ಮಾದರಿಯಾಗಿ ಕಾರ್ಯನಿರ್ವಹಿಸುತ್ತಿದೆ ಇಲ್ಲಿ ತಿಂಗಳಿಗೆ 300 ರಿಂದ 400 ಹೆರಿಗೆಗಳು ನಡೆಯುತ್ತಿರುವುದು ಹೆಮ್ಮೆಯ ವಿಷಯ ರೋಗಿಗಳು ಹಾಗೂ ಸಾರ್ವಜನಿಕರು ಇಲ್ಲಿನ ವೈದ್ಯರ ಸೇವೆಯ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಆಸ್ಪತ್ರೆಯಲ್ಲಿ ಕುಡಿಯುವ ನೀರು ಹಾಗೂ ಬಿಸಿನೀರಿನ ವ್ಯವಸ್ಥೆ ಸಮರ್ಪಕವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು. ಅಲ್ಲದೆ, ನೂತನವಾಗಿ ನಿರ್ಮಾಣವಾಗುತ್ತಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಕಾಮಗಾರಿಯನ್ನು ಶ್ಲಾಘಿಸಿದರು.

**ಸರ್ಕಾರಿ ಯೋಜನೆಗಳ ಮಾಹಿತಿಯ ಕೊರತೆ: ಅಸಮಾಧಾನ**

ಆಸ್ಪತ್ರೆಯ ಉತ್ತಮ ಸೇವೆಯ ನಡುವೆಯೂ ಸಾರ್ವಜನಿಕರಿಗೆ ಸರ್ಕಾರದ ವಿವಿಧ ಆರೋಗ್ಯ ಯೋಜನೆಗಳ ಬಗ್ಗೆ ಸರಿಯಾದ ಮಾಹಿತಿ ಇಲ್ಲದಿರುವುದಕ್ಕೆ ಬೇಸರ ವ್ಯಕ್ತಪಡಿಸಿದರು. "ಜನರಿಗೆ ಯೋಜನೆಗಳ ಮಾಹಿತಿ ಸಿಗದಿರುವುದು ವಿಷಾದನೀಯ. ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ಮೇಲಧಿಕಾರಿಗಳಿಗೆ ಸೂಚಿಸುತ್ತೇನೆ, ಎಂದ ಅವರು, ಸ್ಥಳದಲ್ಲಿದ್ದ ತಾಲೂಕು ವೈದ್ಯಾಧಿಕಾರಿ ಡಾ. ಬಸಗೌಡ ಕಾಗೆ ಅವರಿಗೆ ಆಸ್ಪತ್ರೆಯ ಆವರಣದಲ್ಲಿ ಮಾಹಿತಿ ಫಲಕಗಳನ್ನು (ಡಿಸ್‌ಪ್ಲೇ) ಅಳವಡಿಸಲು ಸೂಚನೆ ನೀಡಿದರು.

**ದುಡ್ಡು ಪಡೆಯುವ ಆರೋಪಕ್ಕೆ ಪ್ರತಿಕ್ರಿಯೆ:** ಹೆರಿಗೆಗೆ ಹಣ ಪಡೆಯುತ್ತಾರೆ ಎಂಬ ಆರೋಪಗಳ ಕುರಿತು ಉತ್ತರಿ ಸಿದ ಅವರು, "ನಾನು ಅನೇಕ ಬಾಣಂ ತಿಯರಿಗೆ ವಿಚಾರಿಸಿದ್ದೇನೆ, ಯಾರೂ ಕೂಡ ಹಣ ನೀಡಿದ್ದಾಗಿ ದೂರು ನೀಡಿಲ್ಲ. ವೈದ್ಯರ ಮೇಲೆ ಆರೋಪ ಮಾಡುವಾಗ ಸೂಕ್ತ ಸಾಕ್ಷ್ಯಗಳಿರಬೇಕು. ಇಲ್ಲದಿದ್ದರೆ ಉತ್ತಮವಾಗಿ ಸೇವೆ ಸಲ್ಲಿಸುತ್ತಿರುವ ವೈದ್ಯರ ನೈತಿಕ ಸ್ಥೈರ್ಯ ಕುಗ್ಗುತ್ತದೆ. ಒಂದು ವೇಳೆ ಸಾಕ್ಷ್ಯಾಧಾರಿತ ದೂರುಗಳಿದ್ದರೆ ಖಂಡಿತವಾಗಿಯೂ ಮೇಲಾಧಿಕಾರಿಗಳ ಗಮನಕ್ಕೆ ತಂದು ಕ್ರಮಕೈಗೊಳ್ಳಲು ತಿಳಿಸುವುದಾಗಿ ," ಸ್ಪಷ್ಟಪಡಿಸಿದರು.

**ಶೌಚಾಲಯ ದುರಸ್ತಿ:** ಆಸ್ಪತ್ರೆಯ ಶೌಚಾಲಯಗಳಲ್ಲಿನ ಸಿಂಕ್‌ಗಳು ಬಂದ್ ಆಗಿದ್ದು, ಅವುಗಳನ್ನು ಕೂಡಲೇ ಸರಿಪಡಿಸುವಂತೆ ಸೂಚಿಸಿದರು.

**ಔಷಧಿಗಳಲಭ್ಯತೆ:** ಕೆಲವರು ಹೊರಗಿನ ಔಷಧಿ ಬರೆಯುತ್ತಿದ್ದಾರೆ ಎಂದು ದೂರಿದ್ದಾರೆ. ಅನುದಾನದ ಕೊರತೆಯಿಂದ ಕೆಲವು ಔಷಧಿಗಳ ಕೊರತೆ ಇರಬಹುದು, ಈ ಬಗ್ಗೆ ಸರಕಾರದ ಮಟ್ಟದಲ್ಲಿ ಚರ್ಚಿಸಿ ಪರಿಹಾರ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ಈ ವೇಳೆ ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ಬಸಗೌಡಾ ಕಾಗೆ, ತಾಲೂಕಾ ದಂಡಾಧಿಕಾರಿ ಸಿದರಾಯ ಭೋಸಗಿ, ತಾ.ಪಂ.ಅಧಿಕಾರಿ ಶಿವಾನಂದ ಕಲ್ಲಾಪುರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ಮಂಜುನಾಥ ಸೌಂದಲಗೇಕರ, ಪುರಸಭೆ ಮುಖ್ಯಾಧಿಕಾರಿ ಅಶೋಕ ಗುಡಿಮನಿ ಆಸ್ಪತ್ರೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಇಷ್ಟಲಿಂಗ ಶ್ರೇಷ್ಠವಾಗಿದ್ದು ಅದನ್ನು ಭಕ್ತಿಯಿಂದ ಪೂಜಿಸಿದರೆ ಇಷ್ಟಾರ್ಥ ಸಿದ್ಧಿ




**ಬೆಳಗಾವಿ ವಾರ್ತೆ ಗೋಕಾಕ:** ಇಷ್ಟಲಿಂಗ ಶ್ರೇಷ್ಠವಾಗಿದ್ದು ಅದನ್ನು ಭಕ್ತಿಯಿಂದ ಪೂಜಿಸಿದರೆ ಇಷ್ಟಾ ರ್ಥ ನೆರವೇರುವದೆಂದು ಇಲ್ಲಿಯ ಶೂನ್ಯ ಸಂಪಾದನ ಮಠದ ಶ್ರೀ ಮುರು ಘರಾ ಜೇಂದ್ರ ಮಹಾಸ್ವಾಮಿಗಳು ಹೇಳಿದರು.

ಅವರು, ಮಂಗಳವಾರದಂದು ನಗರದ ಬಸವ ಮಂದಿರದಲ್ಲಿ ಕರ್ನಾಟಕ ರಾಜ್ಯ ಬಣಜೀಗ ಸಮಾಜ ಕ್ಷೇಮಾಭಿವೃದ್ಧಿ ಸಂಘ ಮಹಿಳಾ ಘಟಕ ಗೋಕಾಕ ಇವರು ಹಮ್ಮಿಕೊಂಡ ಬಸವ ಧರ್ಮ ಸಂಸ್ಕಾರ ಶಿಬಿರ ಸಮಾರೋಪ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡುತ್ತಿದ್ದರು.

ನಾವೇ ಲಿಂಗವಾಗಿದ್ದು ಅದನ್ನು ತಿಳಿಸುವ ಸಾಧನ ಇಷ್ಟಲಿಂಗವಾಗಿದೆ. ಲಿಂಗ ಪೂಜೆ ಶ್ರೇಷ್ಠವಾದದ್ದು ಚಂಚಲವಾದ ಮನಸನ್ನು ಏಕಾಗ್ರತೆಗೆ ತಂದು ಒಳಗಿನ ಲಿಂಗವನ್ನು ಜಾಗೃತಗೊಳಿಸುತ್ತದೆ. ದೇವರು ಗುರು, ಲಿಂಗ, ಜಂಗಮರ ಸ್ವರೂಪನಾಗಿರುತ್ತಾನೆ. ಬಸವಾಧಿ ಶರಣರು ನೀಡಿದ ವಚನ ಸಾಹಿತ್ಯ ಜೀವನಕ್ಕೆ ಮಾರ್ಗದರ್ಶಿಯಾಗಿದೆ. ಎಲ್ಲ ಯೋಗಕ್ಕಿಂತ ಶಿವಯೋಗ ಶ್ರೇಷ್ಠವಾಗಿದೆ. ಇದರಿಂದ ಆತ್ಮ ಮನಸ್ಸು ಪ್ರಭಲವಾಗುತ್ತದೆ. ಧರ್ಮ ಸಂಸ್ಕಾರವನ್ನು ಗುರುವಿನ ಮೂಲಕ ಅರಿತು. ಬಸವಣ್ಣನೇ ಸರ್ವಸ್ವವೆಂದು ತಿಳಿದು ಸಂಸ್ಕಾರವಂತ 'ರಾಗಿರೆಂದು ತಿಳಿಸಿದರು. ಈ ಸಂದರ್ಭದಲ್ಲಿ ಬೆಂಗಳೂರಿನ ಬಸವ ಧರ್ಮ ಪೀಠದ ವಿಜಯಾಂಬಿಕಾ ಮಾತಾಜಿ, ಮಹಿಳಾ ಘಟಕದ ಅಧ್ಯಕ್ಷೆ ಮಹಾದೇವಿ ಉಪ್ಪಿನ, ಕಾರ್ಯದರ್ಶಿ ಹರ್ಷಿತಾ ಸವಣೂರ, ಶೈಲಾ ಬಿದರಿ, ದೀ ಪಾ ಬೆಲ್ಲದ, ಆರತಿ ಗುಗ್ಗವಾಡ, ವಿಮಲಾ ಮತ್ತೆನ್ನನವರ, ಲೀಲಾ ನಂದಿ ಇದ್ದರು.

# ಶಿಕ್ಷಕ ಕೇವಲ ಪಾಠ ಮಾಡುವ ಯಂತ್ರ ಆಗಬಾರದು: ಡಾ.ಅರ್ಚನಾ ಅಥಣಿ




"ಶಿಕ್ಷಣ ಸಂಸ್ಥೆಗಳು ಮಕ್ಕಳಿಗೆ ನೈತಿಕ ಶಿಕ್ಷಣ ನೀಡಲು ಮುಂದಾಗಬೇಕು.ಮಕ್ಕಳಿಗೆ ಶಿಕ್ಷಣದೊಂದಿಗೆ ಸಂಸ್ಕಾರ, ಸಂಸ್ಕೃತಿ, ಗುರು ಹಿರಿಯರಿಗೆ ಗೌರವ ಕೊಡುವುದು,ಇಂಥ ಸಂಸ್ಕೃತಿ ಬೆಳೆಸುವ ಕಾರ್ಯ ತ್ವರಿತಗತಿಯಲ್ಲಿ ಆಗಬೇಕಿದೆ. ಭಾರತದ ಸಂಸ್ಕೃತಿಯನ್ನು ವಿದೇಶಿಗರು ಇಂದು ಎತ್ತಿ ಹಿಡಿಯುವ ಕಾರ್ಯ ಮಾಡುತ್ತಿದ್ದಾರೆ."

**ಡಾ.ಅರ್ಚನಾ ಅಥಣಿ**
**ಸಾಹಿತಿ**

**ಬೆಳಗಾವಿ ವಾರ್ತೆ ಮೋಳೆ:** ಶಿಕ್ಷಕ ಕೇವಲ ಪಾಠ ಮಾಡುವ ಯಂತ್ರವಾಗಬಾರದು, ವಿದ್ಯಾರ್ಥಿಗಳಿಗೆ ಆದರ್ಶ ಜೀವನವನ್ನು ಕಲಿಸುವ ಸ್ಫೂರ್ತಿಯ ಸೆಲೆಯಾಗಬೇಕು ಎಂದು ಸಾಹಿತಿ ಡಾ.ಅರ್ಚನಾ ಅಥಣಿ ಅಭಿಪ್ರಾಯಪಟ್ಟರು.

ಅವರು ಕಾಗವಾಡ ತಾಲೂಕಿನ ಐನಾಪೂರ ಪಟ್ಟಣದ ಕೆ.ಆರ್.ಇ.ಎಸ್ ಡಿ.ಇ.ಡಿ ಕಾಲೇಜಿನ ಸನ್ 2025-26 ನೇ ಸಾಲಿನ ದ್ವಿತಿಯ ವರ್ಗದ ಪ್ರಶಿಕ್ಷಣಾರ್ಥಿಗಳ ಬೀಳ್ಕೋಡುವ ಸಮಾರಂಭ ಹಾಗೂ ವಾರ್ಷಿಕ ಸ್ನೇಹ ಸಮ್ಮೇಳನಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದರು.ಮುಂಬರುವ ದಿನಮಾನಗಳಲ್ಲಿ ದೇಶಕ್ಕೆ ಉತ್ತಮ ನಾಗರಿಕರನ್ನು ರೂಪಿಸಿ ಕೊಡುವಲ್ಲಿ ಗುರುವಿನ ಪಾತ್ರ ಅನನ್ಯ, ಭವ್ಯ ಭಾರತವನ್ನು ಕಟ್ಟುವ ಶಿಲ್ಪಿಗಳಾಗಲಿದ್ದೀರಿ, ಕಲಿಕಾ ಸಾಮರ್ಥ್ಯವನ್ನು ಅಳೆಯುವಂತಹ ಮನೋವಿಜ್ಞಾನಿಗಳಾಗಿ ನೀವು ಮುಂದಿನ ದಿನಮಾನಗಳಲ್ಲಿ ಕೆಲಸ ಮಾಡಿದಾಗ ಕಲಿಕಾ ನ್ಯೂನ್ಯತೆ ಇರುವ ವಿದ್ಯಾರ್ಥಿಗಳನ್ನು ಸುಲಭವಾಗಿ ಪ್ರತಿಭಾವಂತರನ್ನಾಗಿಸ ಬಹುದು ಎಂದ ಅವರು, ಶಿಕ್ಷಕರು ನಿಂತ ನೀರಾಗಬಾರದು, ಸದಾ ಪ್ರಸ್ತುತ ವಿಷಯಗಳೊಂದಿಗೆ ಸಕ್ರಿಯಗೊಳಿಸಿಕೊ ಳ್ಳುತ್ತಿರಬೇಕು,ಇಲ್ಲವಾದರೆ ಸ್ಪರ್ಧೆ ಎದುರಿಸಲಾಗದೆ ನಾವು ಬಹಳ ಹಿಂದೆ ಉಳಿಯುವಂತಾಗುತ್ತದೆ ಎಂದು ಪ್ರಶಿಕ್ಷಣಾರ್ಥಿಗಳಿಗೆ ಡಾ.ಅರ್ಚನಾ ಅಥಣಿ ಕಿವಿ ಮಾತು ಹೇಳಿದರು. ಸಮಾರಂಭದ ಅಧ್ಯಕ್ಷತೆಯನ್ನು ಸಂಸ್ಥೆಯ ಕಾರ್ಯಾಧ್ಯಕ್ಷ ಸಂತೋಷ ಪಾಟೀಲ ವಹಿಸಿದ್ದರು. ವೇದಿಕೆಯ ಮೇಲೆ ಹಿರಿಯ ಉಪನ್ಯಾಸಕ ಕೆ.ಟಿ.ಕಾಂಬಳೆ ಮಾತನಾಡಿದರು, ಸಂಜೀವ ಭಿರಡಿ, ರಾಜೇಂದ್ರ ಪೋತದಾರ, ಉದಯ ನಿಡಗುಂದಿ, ಸುರೇಶ ಗಾಣಿಗೇರ, ಪ್ರವೀಣ ಗಾಣಿಗೇರ ಪ್ರವೀಣ ಕುಲಕರ್ಣಿ, ಸೇರಿದಂತೆ ಅನೇಕರು ಇದ್ದರು.

ಈ ವೇಳೆ ಅತಿಥಿಗಳಾಗಿ ಆಗಮಿಸಿದ ಡಾ.ಅರ್ಚನಾ ಅಥಣಿಯವರನ್ನು ಸನ್ಮಾನಿಸಲಾಯಿತು. ಪ್ರಾಚಾರ್ಯ ಎಸ್.ಎಂ. ಮಗದುಮ್ ಸ್ವಾಗತಿಸಿ ವಂದಿಸಿದರು,

# ಎ. 7 ರಂದು ಮೂಡಲಗಿಗೆ ಶ್ರೀ ಸತ್ಯಸಾಯಿ ಪ್ರೇಮ ಪ್ರವಾಹಿನಿ ರಥ ಆಗಮನ



ಮೂಡಲಗಿ ಪಟ್ಟಣದ ಶ್ರೀ ಸಾಯಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಹನುಮಂತ ಸೋರಗಾವಿ, ಕೆ.ಬಿ.ನಾವಳ್ಳಿ ಮಾತನಾಡಿದರು.

**ಬೆಳಗಾವಿ ವಾರ್ತೆ ಮೂಡಲಗಿ:** ಪುಟಪರ್ತಿ ಶ್ರೀ ಸತ್ಯಸಾಯಿ ಬಾಬಾರವರ ಜನ್ಮ ಶತಮಾನೋತ್ಸವ ಸಂಭ್ರಮದ ಅಂಗವಾಗಿ ಶ್ರೀ ಸತ್ಯಸಾಯಿ ಪ್ರೇಮ ಪ್ರವಾಹಿನಿ ರಥವು ಏ. 7ರಂದು ಮುಂಜಾನೆ 9 ಗಂಟೆಗೆ ನಾಗನೂರ ಪಟ್ಟಣಕ್ಕೆ ಆಗಮಿಸುವದು ಎಂದು ಶ್ರೀ ಸತ್ಯಸಾಯಿ ಸೇವಾ ಕ್ಷೇತ್ರ ಸಂಚಾಲಕ ಹನುಮಂತ ಸೊರಗಾವಿ ಹೇಳಿದರು.

ಅವರು ಪಟ್ಟಣದ ಲಕ್ಷ್ಮಿ ನಗರದ ಶ್ರೀ ಸಾಯಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನಾಗನೂರದಿಂದ ಸ್ವಾಗತಿಸಿಕೊಂಡು ಮೂಡಲಗಿ ಪಟ್ಟಣದ ಮೂಡಲಗಿ ಶಿಕ್ಷಣ ಸಂಸ್ಥೆಯ ಮುಂಭಾಗ ಆರತಿ, ಕುಂಭ ಮೇಳ ಹಾಗೂ ವಿವಿಧ ವಾದ್ಯ ಮೇಳಗಳೊಂದಿಗೆ ಭವ್ಯ ಮೆರವಣ ಗೆ ಮೂಲಕ ಪಟ್ಟಣದ ಕಲ್ಮೇಶ್ವರ ಸರ್ಕಲ್, ಕಿತ್ತೂರ ಚೆನ್ನಮ್ಮಾ ಸರ್ಕಲ್, ಕರೆಮ್ಮಾದೇವಿ ಸರ್ಕಲ್, ಸಂಗಪ್ಪಣ್ಣ ಅಂಗಡಿ ಸರ್ಕಲ್ ಮೂಲಕ ಶ್ರೀ ಸಾಯಿ ಮಂದಿರಕ್ಕೆ ಸಾಗಿಬರುವದು. ಮದ್ಯಾಹ್ನ 1ಗಂಟೆಗೆ ಮಂದಿರದಲ್ಲಿ ಧಾರ್ಮಿಕ ಕಾರ್ಯಕ್ರಮ ನಂತರ ಅನ್ನಪ್ರಸಾದ ನಡೆಯಲಿದೆ ಎಂದು ಹೇಳಿದರು.

ಸೇವಾ ಕ್ಷೇತ್ರದ ಸದಸ್ಯ ಕೆ.ಬಿ.ನಾವಳ್ಳಿ ಮಾತನಾಡಿ, ಏ. 7ರಂದು ಮುಂಜಾನೆ 10ಗಂಟೆಗೆ ಶ್ರೀ ಸತ್ಯಸಾಯಿ ಪ್ರೇಮ ಪ್ರವಾಹಿನಿ ಶೋಭಾ ರಥಯಾತ್ರೆಯನ್ನು ಪಟ್ಟಣದ ಶ್ರೀ ಶಿವಬೋಧರಂಗ ಮಠದ ಶ್ರೀ ದತ್ತಾತ್ರೇಯಬೋಧ ಸ್ವಾಮಿಗಳು, ಶ್ರೀ ಶ್ರೀಧರಬೋಧ ಸ್ವಾಮಿಗಳು, ಸುಣಧೋಳಿ ಶ್ರೀ ಶಿವಾನಂದ ಸ್ವಾಮಿಗಳು, ಅರಬಾವಿ ಮತಕ್ಷೇತ್ರದ ಶಾಸಕ ಬಾಲಚಂದ್ರ ಜಾರಕಿಹೊಳಿ, ಶ್ರೀ ಸತ್ಯಸಾಯಿ ಸೇವಾ ಸಂಸ್ಥೆಗಳ ರಾಜ್ಯಾಧ್ಯಕ್ಷ ಪದ್ಮನಾಭ ಪೈ, ಶ್ರೀ ಸತ್ಯಸಾಯಿ ಸೇವಾ ಸಂಸ್ಥೆಗಳ ರಾಜ್ಯ ಸೇವಾ ಸಂಯೋಜಕಿ ಪ್ರೀಯಾ ಪಿ. ಪೈ, ಸತ್ಯಸಾಯಿ ಸೇವಾ ಸಂಸ್ಥೆಗಳ ಬೆಳಗಾವಿ ಜಿಲ್ಲಾಧ್ಯಕ್ಷ ವಸಂತ ಬಾಳಿಗಾ ಉದ್ಘಾಟಿಸುವರು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬಿ.ಎಮ್.ನಂದಿ, ಐ.ಎ. ಪಾಟೀಲ, ರವಿ ನಂದಗಾವಿ, ಲಕ್ಷ್ಮಣ ಕಂಕಣವಾಡಿ, ಮಲ್ಲಪ್ಪ ಮುರಗೋಡ, ಮಹೇಶ ಹಿರೇಮಠ, ಪಡದಪ್ಪ ಕೋತಿನ, ಪ್ರಕಾಶ ಕಂಕಣವಾಡಿ ಮತ್ತಿತರರು ಇದ್ದರು.

# ಏ. 8 ರಂದು ವಿವಿಧ ಮರಗಳ ತೆರವಿಗೆ ಬಹಿರಂಗ ಹರಾಜು

ಧಾರವಾಡ: ಧಾರವಾಡ ಪುಣೆ ಬೆಂಗಳೂರು ರಸ್ತೆ ಬದಿ ಹಾಗೂ ಅಪಾಯಕಾರಿ ಸ್ಥಿತಿಯಲ್ಲಿರುವ 08-ನೀಲಗಿರಿ, 01-ನೇರಳೆ ಸೇರಿ ಒಟ್ಟು 9 ಮರಗಳು ಹಾಗೂ ಧಾರವಾಡ ತಾಲೂಕಿನ ಮುಮ್ಮಿಗಟ್ಟಿ ಗ್ರಾಮ ಪಂಚಾಯತ ವ್ಯಾಪ್ತಿ ಮುಮ್ಮಿಗಟ್ಟಿ ಗ್ರಾಮದ ರಿ.ಸ.ನಂ-55 ಕ್ಷೇತ್ರ 13-ಎಕರೆ, 18 ಗುಂಟೆ ಪೈಕಿ 2-ಎಕರೆ, 00-ಗುಂಟೆ ಜಮೀನಿನಲ್ಲಿರುವ 43-ಅಕೇಶಿಯಾ ಮರಗಳು ಒಟ್ಟು 52 ವಿವಿಧ ಜಾತಿಯ ಮರಗಳನ್ನು ತೆರುವುಗೊಳಿಸಲು ಧಾರವಾಡ ವಲಯ ಅರಣ್ಯ ಅಧಿಕಾರಿ ಕಛೇರಿಯಲ್ಲಿ ಏಪ್ರಿಲ್ 08, 2026 ರಂದು ಮಧ್ಯಾಹ್ನ 3 ಗಂಟೆಗೆ ಬಹಿರಂಗ ಹರಾಜು ಮಾಡಲಾಗುವುದು.

ಮರ ಸಂರಕ್ಷಣಾ ಕಾಯ್ದೆ 1976 ರ ಸೆಕ್ಷನ್ 8 (3) (ಗಿಖಖ) ರ ಸೆಕ್ಷನ್‌ಗಳಲ್ಲಿ ಅಗತ್ಯ ಪಡಿಸಿರುವಂತೆ ಈ ಬಗ್ಗೆ ತಕರಾರು ಸಲ್ಲಿಸಬಯಸುವವರು ತಮ್ಮ ತಕರಾರನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಧಾರವಾಡ ಉಪ ವಿಭಾಗ, ಧಾರವಾಡ ಹಾಗೂ ಧಾರವಾಡದ ಕೆ.ಸಿ.ಪಾರ್ಕ ಎದುರು ಅರಣ್ಯ ಸಂಕೀರ್ಣದಲ್ಲಿರುವ ಮರ ಅಧಿಕಾರಿಯವರಿಗೆ ಲಿಖಿತ ರೂಪದಲ್ಲಿ ಏಪ್ರಿಲ್ 6, 2026 ರ ಒಳಗಾಗಿ ಸಲ್ಲಿಸಬಹುದಾಗಿದೆ ಎಂದು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯ ಕರದಾತರು

## ಏಪ್ರೀಲ್ 30 ರೊಳಗೆ ಆಸ್ತಿ ತೆರಿಗೆ ಪಾವತಿಸಿದಲ್ಲಿ ಶೇ. 5 ರಷ್ಟು ರಿಯಾಯಿತಿ ಸೌಲಭ್ಯವಿದೆ

ಧಾರವಾಡ: ಎಪ್ರಿಲ್-2026 ರ ಮಾಹೆಯಲ್ಲಿ ಆಸ್ತಿ ತೆರಿಗೆ ಪಾವತಿಸಿದಲ್ಲಿ ಪ್ರತಿಶತ ಶೇ. 5 ರ ರಿಯಾಯಿತಿ ಸೌಲಭ್ಯವಿದ್ದು, ಆಸ್ತಿ ತೆರಿಗೆ ಪಾವತಿಸಲು ಏಪ್ರಿಲ್ 06, 2026 ರಿಂದ ಏಪ್ರಿಲ್ 30, 2026 ರವರೆಗೆ ನಿರಂತರವಾಗಿ ಸಾರ್ವಜನಿಕ ರಜೆ ಇದ್ದರೂ ಸಹಿತವಾಗಿ ರಜೆ ಅವಧಿಯಲ್ಲಿ ಪಾಲಿಕೆಯ ಎಲ್ಲಾ ವಲಯ ಕಚೇರಿಗಳಲ್ಲಿ ರಜೆ ದಿನಗಳನ್ನು ಒಳಗೊಂಡಂತೆ ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಆಸ್ತಿ ತೆರಿಗೆಯ ಚಲನ್‌ಗಳನ್ನು ವಿತರಿಸಲು ವ್ಯವಸ್ಥೆ ಮಾಡಲಾಗಿದೆ. ಕಾರಣ ಸಾರ್ವಜನಿಕರು ಎಪ್ರಿಲ್-2026 ರ ಮಾಹೆಯಲ್ಲಿಯೇ ಆಸ್ತಿಕರವನ್ನು ಪಾವತಿಸಿ, ರಿಯಾಯಿತಿ ಸೌಲಭ್ಯವನ್ನು ಸದುಪಯೋಗ ಪಡೆದುಕೊಳ್ಳಬೇಕೆಂದು ಕೋರಲಾಗಿದೆ.

ಸನ್ 2026-27 ನೇ ಸಾಲಿನಲ್ಲಿ ಆಸ್ತಿ ತೆರಿಗೆಯನ್ನು ಎಚ್‌ಡಿ-1 (ಕರ್ನಾಟಕ ಒನ್ ಸೇವಾ) ಕೇಂದ್ರಗಳ ಮುಖಾಂತರ ಅಥವಾ http:// www.hdmc.in ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮುಖಾಂತರ ಸಾರ್ವಜನಿಕರಿಗೆ ಆಸ್ತಿಕರ ಸಂದಾಯ ಮಾಡಲು ಅವಕಾಶವನ್ನು ಕಲ್ಪಿಸಲಾಗಿದೆ ಎಂದು ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001